ವಿಜಯಪುರ | ಸಂಪುಟ 01 | ಸಂಚಿಕೆ 250 | ಪುಟ 4 | ₹ 3.00

https://udayarashminews.com

udayarashmi 7026028778


# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಮಂಗಳವಾರ, ನವೆಂಬರ್ 28, 2023



“ಶತಮಾನದ ಸಂತ, ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳು ಭೌತಿಕ ದೇಹವನ್ನು ತ್ಯಜಿಸಿ ಬಯಲಲ್ಲಿ ಬಯಲಾಗಿ ಒಂದು ವರ್ಷವಾಗುವ ಹಿನ್ನೆಲೆಯಲ್ಲಿ ಜ.1 ಮತ್ತು 2 ರಂದು ವಿಜಯಪುರದ ಜ್ಞಾನಯೋಗಾಶ್ರಮದಲ್ಲಿ “ಗುರುನಮನ ಮಹೋತ್ಸವ” ಹಮ್ಮಿಕೊಳ್ಳಲಾಗಿದೆ.

– ಬಸವಲಿಂಗ ಸ್ವಾಮೀಜಿ
ಅಧ್ಯಕ್ಷರು, ಜ್ಞಾನಯೋಗಾಶ್ರಮ ವಿಜಯಪುರ

ಇದು ಜನತಾ ದರ್ಶನ ಅಲ್ಲ, ಜನಸ್ಪಂದನ ಎಂದ ಸಿಎಂ । ಅರ್ಜಿಗಳ ಇತ್ಯರ್ಥಕ್ಕೆ 15 ದಿನ ಗಡುವು

# ಸಿಎಂ ಜನತಾದರ್ಶನಕ್ಕೆ ಹರಿದುಬಂದ ಜನಸಾಗರ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ತಮ್ಮ ಗೃಹ ಕಚೇರಿ ಕೃಷ್ಣದಲ್ಲಿ ಸತತ ಏಳು ಗಂಟೆಗಳ ಕಾಲ ಜನತಾದರ್ಶನ ನಡೆಸಿ, ಜನರ ಸಮಸ್ಯೆಗಳನ್ನು ಆಲಿಸಿದರು.

ಇಡೀ ದಿನ ನಡೆದ ಈ ಕಾರ್ಯಕ್ರಮದಲ್ಲಿ ಸುಮಾರು ಮೂರು ಸಾವಿರಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದು, ಇವುಗಳ ಇತ್ಯರ್ಥಕ್ಕೆ ಸಿಎಂ ಸಿದ್ದರಾಮಯ್ಯ ಅವರು 15 ದಿನ ಗಡುವು ನೀಡಿದ್ದಾರೆ.

ಜನಸ್ಪಂದನ ಕಾರ್ಯಕ್ರಮದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಇದು ಜನತಾ ದರ್ಶನ ಅಲ್ಲ. ಜನಸ್ಪಂದನ ಕಾರ್ಯಕ್ರಮ. ಇಂದು 3,500 ಅರ್ಜಿಗಳು ಬಂದಿವೆ. ಇನ್ನೂ ಜನರು ಬರುತ್ತಿದ್ದಾರೆ. ಎಲ್ಲಾ ಅರ್ಜಿಗಳನ್ನು ಸ್ವೀಕರಿಸಿ ತಕ್ಷಣ ಪರಿಹಾರ ಕೊಡಬೇಕು. ಮುಂದಿನ 15 ದಿನಗಳಲ್ಲಿ ಈ ಎಲ್ಲಾ ಅರ್ಜಿಗಳ ಇತ್ಯರ್ಥ ಆಗಬೇಕು. ಮತ್ತೆ ಜನಸ್ಪಂದನ ಮಾಡಿದಾಗ ಇಷ್ಟು ಅರ್ಜಿ ಬರಬಾರದು ಎಂದರು.

ನಾನು ಬೆಳಗ್ಗೆಯಿಂದಲೇ ಜನರ ಬಳಿಗೆ ತೆರಳಿ ಅವರ ಕುಂದುಕೊರತೆಗಳನ್ನು ಖುದ್ದು ಆಲಿಸಿದ್ದೇನೆ. ಸ್ವೀಕೃತವಾಗಿರುವ ಎಲ್ಲ ಅರ್ಜಿಗಳ ಬಗ್ಗೆ ಕಾನೂನು ರೀತ್ಯ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಇಂದಿನ ಜನಸ್ಪಂದನಕ್ಕೆ ಉದ್ಯೋಗ ಬೇಡಿಕೆಯೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ವಿಕಲಚೇತನರು ಆಗಮಿಸಿದ್ದು, ಸಾಧ್ಯವಾದ ಕಡೆಗಳಲ್ಲಿ ಉದ್ಯೋಗ ಹಾಗೂ ಮಾಸಾಶನ ಒದಗಿಸಲು ಸೂಚನೆ ನೀಡಲಾಗಿದೆ. ಜಿಲ್ಲಾ ಮಂತ್ರಿಗಳು, ಜಿಲ್ಲಾಧಿಕಾರಿಗಳು ಸ್ಥಳೀಯವಾಗಿ ಜನರ ಸಮಸ್ಯೆ ಬಗೆಹರಿಸಬೇಕೆಂದು ಸೂಚನೆ ನೀಡಲಾಗಿದೆ. ಮೂರು ತಿಂಗಳ ನಂತರ ಮತ್ತೊಮ್ಮೆ ಜನಸ್ಪಂದನ ನಡೆಸಲಾಗುವುದು. ಆಗ ಈ ಪ್ರಮಾಣದಲ್ಲಿ ಜನರು ತಮ್ಮ ಸಮಸ್ಯೆಗಳೊಂದಿಗೆ ಬರದಂತೆ ಜಿಲ್ಲಾಧಿಕಾರಿಗಳು ತಹಶೀಲ್ದಾರರು, ಉಪವಿಭಾಗಾಧಿಕಾರಿಗಳು ನೋಡಿಕೊಳ್ಳಬೇಕು ಎಂಬ ಎಚ್ಚರಿಕೆಯನ್ನು ನೀಡಲಾಗಿದೆ ಎಂದರು.

ಕ್ಯಾನ್ಸರ್, ಕಿಡ್ನಿ, ಹೃದಯ ಸಂಬಂಧಿ ಸಮಸ್ಯೆ ಸೇರಿದಂತೆ ಆರೋಗ್ಯ ಸಮಸ್ಯೆಯಿಂದಾಗಿ ವೈದ್ಯಕೀಯ ವೆಚ್ಚ ಭರಿಸುವ ಮನವಿಗಳು ಹೆಚ್ಚು ಸ್ವೀಕೃತವಾಗಿವೆ. ನಾನು ಮುಖ್ಯಮಂತ್ರಿಯಾದ ನಂತರ ಜನರ ಆರೋಗ್ಯ ಸಮಸ್ಯೆಗಳ ಪರಿಹಾರಕ್ಕಾಗಿ ಸುಮಾರು 25 ಕೋಟಿ ರೂ.ಗಳನ್ನು ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಬಿಡುಗಡೆ ಮಾಡಲಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಉತ್ತಮ ಚಿಕಿತ್ಸೆ ಲಭಿಸುತ್ತದೆ ಎಂಬ ನಂಬಿಕೆಯಿಂದ ಜನರು ಸರ್ಕಾರಿ ಆಸ್ಪತ್ರೆ ಬಿಟ್ಟು, ಖಾಸಗಿ ಆಸ್ಪತ್ರೆಯತ್ತ ಮುಖ ಮಾಡುವ ಕಾರಣ, ಅವರ ವೈದ್ಯಕೀಯ ವೆಚ್ಚಗಳೂ ಹೆಚ್ಚಾಗುತ್ತವೆ. ಆ ವೆಚ್ಚದಲ್ಲಿ ಸಣ್ಣಪ್ರಮಾಣವನ್ನು ಸರ್ಕಾರ ಈ ರೀತಿ ಭರಿಸಲು ಪ್ರಯತ್ನಿಸುತ್ತಿದೆ ಎಂದು ಸಿಎಂ ಹೇಳಿದ್ದಾರೆ.

ಅಧಿಕಾರಿಗಳು ಜನರ ಸಮಸ್ಯೆಗೆ ಸ್ಪಂದಿಸುವ ಕೆಲಸ ಮಾಡಬೇಕು. ಸಮಸ್ಯೆ ಬಗೆಹರಿಸದೆ ಇದ್ದರೆ ದೊಡ್ಡದಾಗುತ್ತಲೇ ಹೋಗುತ್ತದೆ. ಬಹುತೇಕ ಸಮಸ್ಯೆಗಳು ಕಂದಾಯ ಇಲಾಖೆಗೆ ಸಂಬಂಧಿಸಿದ್ದಾಗಿದೆ. ಅನೇಕ ಜನರು ಕೆಲಸ ಕೊಡಿಸಿ ಅಂತಾ ಕೇಳಿದ್ದಾರೆ. ವಿಕಲಚೇತನರಿಗೆ 4 ಸಾವಿರ ತ್ರಿಚಕ್ರ ವಾಹನ ನೀಡಲು ಸೂಚಿಸಿದ್ದೇನೆ ಎಂದರು.

## ಜನತಾ ದರ್ಶನ ಬೋಗಸ್ :ಬಿಜೆಪಿ ಟೀಕೆ



ಜನತಾ ದರ್ಶನವನ್ನು ಬೋಗಸ್ ಎಂದು ಪ್ರತಿಪಕ್ಷ ಬಿಜೆಪಿ ಟೀಕಿಸಿದ್ದು, ಅವರೊಬ್ಬರೇ (ಸಿದ್ದರಾಮಯ್ಯ) ಜನತಾ ದರ್ಶನ ನಡೆಸಿದರೆ ಏನೂ ಆಗುವುದಿಲ್ಲ ಎಂದು ಹೇಳಿದೆ.

ಸಿದ್ದರಾಮಯ್ಯ ಅವರು ಜನತಾದರ್ಶನ ನಡೆಸುವ ಮೊದಲು ತಮ್ಮ ಸಚಿವ ಸಂಪುಟದ ಸಹೋದ್ಯೋಗಿಗಳನ್ನು ಸಾರ್ವಜನಿಕರಿಗೆ ದರ್ಶನ ಮಾಡಿಸಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ವ್ಯಂಗ್ಯವಾಡಿದ್ದಾರೆ.

ಸರ್ಕಾರ ರಚನೆಯಾಗಿ ಏಳು ತಿಂಗಳಾದರೂ ಈಗಲೂ ಸಚಿವರು ಯಾರು ಎಂಬುದು ಜನರಿಗೆ ಗೊತ್ತಿಲ್ಲ. ಮುಖ್ಯಮಂತ್ರಿಗಳು ನಡೆಸುತ್ತಿರುವುದು ಜನತಾದರ್ಶನವಲ್ಲ. ಅದೊಂದು ಬೋಗಸ್ ದರ್ಶನ. ಮೊದಲು ಸಂಪುಟದ ಸಚಿವರನ್ನು ಜನತೆಗೆ ಪರಿಚಯ ಮಾಡಿ ಎಂದು ತಿರುಗೇಟು ನೀಡಿದ್ದಾರೆ.

ಬಾರತೀಯ ಸಂವಿಧಾನ ಕುರಿತ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಶಾಸಕ ಮನಗೂಳಿ ಅಭಿಮತ

# ಭಾರತದ ಸಂವಿಧಾನ ಭಾರತೀಯರ ಜೀವಾಳ



**ಉದಯರಶ್ಮಿ ನ್ಯೂಸ್**ಸಿಂದಗಿ: ಸಂವಿಧಾನ ಸಮಾನತೆ, ಸೌಹಾರ್ದತೆ, ಭಾವೈಕ್ಯತೆಯನ್ನು ಹೊಂದಿದೆ. ಜಗತ್ತಿನಲ್ಲಿ ಅತ್ಯಂತ ಶ್ರೇಷ್ಠ ಸಂವಿಧಾನ ಬಾರತೀಯ ಸಂವಿಧಾನವೆಂದು ಸಿವ್ಹಿಲ್ ಮತ್ತು ಜೆ.ಎಮ್.ಎಫ್.ಸಿ.ನ್ಯಾಯಾಧೀಶ ಮಹಾಂತೇಶ ಭೂಸಗೋಳ ಹೇಳಿದರು.

ಸೋಮವಾರದಂದು ಪಟ್ಟಣದ ತಾಲೂಕಾ ಕಾನೂನು ಸೇವಾ ಸಮಿತಿ, ವಕೀಲರ ಸಂಘ ಸಿಂದಗಿ ಮತ್ತು ಎಚ್.ಜಿ.ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ಭಾರತೀಯ ಸಂವಿಧಾನ ಕುರಿತಾದ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನದ ಪೀಠಿಕೆಯನ್ನು ಅಧ್ಯಯನ ಮಾಡುವುದು ಹಾಗೂ ಅದರಂತೆ ನಡೆದುಕೊಳ್ಳುವುದು ಎಲ್ಲರ ಆದ್ಯ ಕರ್ತವ್ಯವಾಗಬೇಕು ಎಂದರು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶಾಸಕ ಅಶೋಕ ಮನಗೂಳಿ ಮಾತನಾಡಿ, ಸಂವಿಧಾನ ನಮಗೆಲ್ಲ ಎಲ್ಲ ರೀತಿಯ ಸೌಲಭ್ಯವನ್ನು ನೀಡಿದೆ. ಒಂದು ರೀತಿಯಲ್ಲಿ ಭಾರತದ ಸಂವಿಧಾನ ಬಾರತೀಯರ ಜೀವಾಳವಿದ್ದಂತೆ. ಅದರ ಕುರಿತು ತಿಳುವಳಿಕೆ ಪಡೆಯುವುದು, ಅದರ ಸರಿಯಾದ ಪಾಲನೇ ಮಾಡುವುದು ನಮ್ಮೆಲ್ಲ ಜವಾಬ್ದಾರಿಯಾಗಿದೆ. ಶಾಲಾ ಕಾಲೇಜುಗಳಲ್ಲಿ ಈ ವಿಚಾರ ಕುರಿತು ವಿಚಾರ ಸಂಕಿರ್ಣಗಳು, ಚರ್ಚೆಗಳು ನಡೆಯಬೇಕು ಇದೊಂದು ಜ್ಞಾನಕ್ಕೆ ಮತ್ತು ಬದುಕಿಗೆ ಉತ್ತಮವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಚಾರ್ಯ ಎ.ಆರ್.ಹೆಗ್ಗಣದೊಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂವಿಧಾನದ ಪೀಠಿಕೆಯನ್ನು ಮಕ್ಕಳಿಗೆ ಬೊಧಿಸಿದರು.

ರಾಜ್ಯಶಾಸ್ತ್ರ ಉಪನ್ಯಾಸಕ ಎಫ್.ಎ.ಹಾಲಪ್ಪನವರ ಉಪನ್ಯಾಸ ನೀಡಿ, ಭಾರತೀಯ ಸಂವಿಧಾನ ಅನೇಕ ವಿಶಿಷ್ಟತೆಗಳನ್ನು ಒಳಗೊಂಡ ಸಂವಿಧಾನವಾಗಿದೆ. ಇದರ ಪ್ರತಿ ಅಂಶಗಳು ಕೂಡಾ ಪ್ರತಿ ಭಾರತೀಯನು ತಿಳಿದುಕೊಂಡು ಬದುಕಬೇಕಾಗಿದೆ.ಪ್ರಸ್ತುತ ಕಾಲಗಟ್ಟದಲ್ಲಿ ಸಂವಿಧಾನದ ವಿರುದ್ಧವಾಗಿ ಅನೇಕ ಕಾರ್ಯಚಟುವಟಿಕೆಗಳು ನಡೆಯುತ್ತಿರುವುದು ಘೋರವಾಗಿದೆ ಪ್ರಜ್ಞಾವಂತರಾದ ನಾವೆಲ್ಲ ಅದರ ವಿರುದ್ದ ಧ್ವನಿ ಎತ್ತಬೇಕಾಗಿದೆ ಎಂದರು.

ವೇದಿಕೆ ಮೇಲೆ ಸಹಕಾರಿ ಸರಕಾರಿ ವಕೀಲೆ ಎಫ್.ಝಡ್.ಖತೀಬ, ಸರಕಾರಿ ವಕೀಲ ಬಿ.ಜಿ.ನೆಲ್ಲಗಿ, ವಕೀಲರ ಸಂಘದ ಅಧ್ಯಕ್ಷ ಎಸ್.ಬಿ.ದೊಡ್ಡಮನಿ ಇದ್ದರು.


ಉಪನ್ಯಾಸಕ ಸಿದ್ದಲಿಂಗ ಕಿಣಗಿ ನಿರೂಪಿಸಿದರು. ಸೃಷ್ಠಿ ಸಿಂಗೆ ಪ್ರಾರ್ಥಿಸಿದರು. ಬಿ.ಜಿ.ನೆಲ್ಲಗಿ ವಂದಿಸಿದರು.

ಉಪನ್ಯಾಸಕರಾದ ಆರ್.ಬಿ ಹೊಸಮನಿ, ಆರ್.ಸಿ ಕಕ್ಕಳಮೇಲಿ, ಎಮ್.ಎನ್ ಅಜ್ಜಪ್ಪ, ಸತೀಶ ಬಸರಕೋಡ, ಮುಕ್ತಾಯಕ್ಕ ಕತ್ತಿ, ಎ.ಬಿ ಪಾಟೀಲ, ಎಸ್.ಎಸ್ ಚವ್ಹಾಣ, ಎ ಸಿಂದಗಿಕರ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ರಾಜ ನುಡಿ

ಒಂದು ತೆಳ್ಳನೆಯ ತೆಳು ಎಲೆಯಲ್ಲಿ ಇಡೀ ಜೀವ ಸಂಕುಲದ ಆಹಾರ ತಯಾರಿಕಾ ಘಟಕವನ್ನೇ ಬಚ್ಚಿಟ್ಟಿರುವ ದೇವರು, ನಮ್ಮ ಜೀವನದ ಕಷ್ಟಗಳಿಗೆ ಪರಿಹಾರವನ್ನು ಎಲ್ಲಾದರೂ ಇಟ್ಟಿರಲಾರನೆ! ತಾಳ್ಮೆಯಿಂದ ಕಂಡುಕೊಳ್ಳಬೇಕಷ್ಟೆ.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 242


*ಅಂಗ ಲಿಂಗರಸ ಸವಿಯುವ ಪರಿ*

*ಕಾಲಲ್ಲಿ ಮೆಟ್ಟದೆ, ಕೈಯಲ್ಲಿ ಹಿಡಿಯದೆ ಮರನನೇರಬೇಕು.*
*ಕಣ್ಣಿನಲ್ಲಿ ನೋಡದೆ, ಬೆರಳಿನಲ್ಲಿ ಹರಿಯದೆ ಬಾಯಲ್ಲಿ ಮೆಲ್ಲದೆ, ಹಣ್ಣಿನ ರಸವ ನುಂಗಬೇಕು,*
*ಸದ್ಯೋಜಾತಲಿಂಗದಲ್ಲಿ.*
*– ಅವಸರದ ರೇಕಣ್ಣನವರು*

ಅಂಗವು ಲಿಂಗದೊಂದಿಗೆ ಸಂಗಮವಾದಾಗ ಪಡೆಯುವ ಅನುಭಾವ ಫಲದ ಸವಿರುಚಿಯನ್ನು ಹೇಗೆ ಅನುಭವಿಸಬೇಕು ಎಂಬುದನ್ನು ಅವಸರದ ರೇಕಣ್ಣನವರು ಈ ವಚನದಲ್ಲಿ ವಿವರಿಸಿದ್ದಾರೆ. ಅಂತರಂಗದಲ್ಲಿ ಅಡಗಿರುವ ಜ್ಞಾನ ವೃಕ್ಷದಲ್ಲಿ ದೊರಕುವ ಅನುಭಾವದ ಫಲವನ್ನು ಪಡೆಯುವುದಕ್ಕಾಗಿ ಕಾಲಿನ ಚಲನೆ ಬೇಕಾಗಿಲ್ಲ, ಆ ಫಲವನ್ನು ಬೆರಳಿನಿಂದ ಕಿತ್ತುಕೊಳ್ಳಲು ಸಾಧ್ಯವಿಲ್ಲ, ಆ ಮರವನ್ನು ಏರದೆ ಬಾಹ್ಯಕಣ್ಣಿಂದ ಫಲವನ್ನು ನೋಡದೆ ಬಾಯಲ್ಲಿ ಮೆಲ್ಲದೆ ಹಣ್ಣಿನ ರಸವನ್ನು ಸವಿಯುವುದೇ ನಿಜವಾದ ಅನುಭಾವವೆಂದು ಕರೆದಿದ್ದಾರೆ. ಇದು ಇಷ್ಟಲಿಂಗದ ನಿರೀಕ್ಷಣೆಯಿಂದ ಮಿದುಳಿನ ಪಿಟ್ಯುಟರಿ ಭಾಗದಲ್ಲಿ ಸ್ರವಿಸುವ ಮೆಲಾಟಿನಿನ್ ದ್ರವದ ವರ್ಣನೆಯಾಗಿದೆ. ಇದು ಶರಣರು ಅಂತರಂಗದಲ್ಲಿ ಕಂಡ ದೇವರ ರೂಪ ಮತ್ತು ಅನುಭಾವ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಪೂರ್ಣ ಪ್ರಮಾಣದ ಕಬ್ಬು ಸಾಗಣೆಗೆ ರೈತರ ಆಗ್ರಹ



**ಉದಯರಶ್ಮಿ ನ್ಯೂಸ್**

ವಿಜಯಪುರ: ಬಾಲಾಜಿ ಸಕ್ಕರೆ ಕಾರ್ಖಾನೆಯವರು ಪೂರ್ಣ ಪ್ರಮಾಣದ ಕಬ್ಬನ್ನು ಸಾಗಾಣೆ ಮಾಡಲು ಆದೇಶ ಮಾಡಬೇಕೆಂದು

ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರಿಗೆ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಕಾನ್ನಾಳ ಗ್ರಾಮದ ಕಬ್ಬು ಬೆಳೆಗಾರರು ಸೋಮವಾರ ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ರೈತಸಂಘದ ಜಿಲ್ಲಾ ಪ್ರ.ಕಾರ್ಯದರ್ಶಿ ಅರವಿಂದ ಕುಲಕರ್ಣಿ, ರಾಜಶೇಖರ ಸಜ್ಜನ, ಸಂದರ್ಭದಲ್ಲಿ

ಸಂಗಪ್ಪ ಸಜ್ಜನ ಮೊದಲಾದವರು ಮಾತನಾಡಿ, ಕಾನ್ನಾಳ ಗ್ರಾಮದಲ್ಲಿ ಈ ವರ್ಷವೂ ಕೂಡ ಅಂದಾಜು 150 ರಿಂದ 200 ಎಕರೆ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿದೆ. ಪ್ರತಿವರ್ಷವೂ ಕೂಡ ಹೆಚ್ಚಿನ ಪ್ರಮಾಣದಲ್ಲಿ ಕಬ್ಬು ಬೆಳೆದು ಮುದ್ದೇಬಿಹಾಳದ ಬಾಲಾಜಿ ಸಕ್ಕರೆ ಕಾರ್ಖಾನೆಗೆ ಸಾಗಾಣೆ ಮಾಡುತ್ತೇವೆ. ಈ ಭಾರಿ ಭೀಕರ ಬರಗಾಲದ ನಡುವೆಯು ಕೂಡ ಕಬ್ಬು ಬೆಳೆಯಲಾಗಿದೆ. ಆದರೆ ಈ ವರ್ಷ ಕಾರ್ಖಾನೆಯವರು ಎತ್ತರ ಮಟ್ಟದಲ್ಲಿ ಬೆಳೆದ ಹಾಗೂ ದಪ್ಪಗಿರುವ ಕಬ್ಬನ್ನು ಮಾತ್ರ ಕಾರ್ಖಾನೆಗೆ ತೆಗೆದುಕೊಂಡು ಹೋಗುತ್ತಿದ್ದು ಸ್ವಲ್ಪ ಪ್ರಮಾಣದಲ್ಲಿ ಎತ್ತರದಲ್ಲಿ ಕಡಿಮೆ ಇದ್ದ ಕಬ್ಬನ್ನು ಸಾಗಾಣೆಮಾಡಲು ಹಿಂದೇಟು ಹಾಕುತ್ತಿದ್ದಾರೆ. ಈ ಬಾರಿ ಸಕಾಲಕ್ಕೆ ಮಳೆಯಾಗದೆ ಇರುವುದರಿಂದ ಕಬ್ಬು ಬೆಳೆವಣಿಗೆಯಲ್ಲಿ ಸ್ವಲ್ಪ ಕುಂಠಿತವಾಗಿದೆ. ಇದನ್ನೇ ನೆಪವಾಗಿಟ್ಟುಕೊಂಡು ಕಾರ್ಖಾನೆಯ ಸೂಪರ್ ವೈಸರ್‌ಗಳು ನೀವು ಸರಿಯಾಗಿ ನೀರು ಉಣಿಸಿ ಎಂದು ನಮಗೆ ಸಲಹೆ ನೀಡುತ್ತಾರೆ. ಮಳೆ ಇಲ್ಲದಿದ್ದರೆ ನೀರು ಉಣಿಸುವುದಾದರೂ ಎಲ್ಲಿಂದ? ಈ ರೀತಿ ಕಾರ್ಖಾನೆಯವರು ಕಬ್ಬು ಬೆಳೆದ ರೈತರಿಗೆ ದಿಕ್ಕು ತಪ್ಪಿಸುತ್ತಿದ್ದಾರೆ. ಮೊದಲೇ ಬರಗಾಲದಿಂದ ತತ್ತರಿಸಿದ ಕಬ್ಬು ಬೆಳೆದ ರೈತರು ಸಂಕಷ್ಟ ಎದುರಿಸುವಂತಾಗಿದೆ. ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಬಾಲಾಜಿ ಸಕ್ಕರೆ ಕಾರ್ಖಾನೆಯವರು ಕಬ್ಬು ಬೆಳೆದ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ. ಉಳಿದ ಕಬ್ಬನ್ನು ಕೂಡ ಸಾಗಾಣೆ ಮಾಡಲು ಕಟ್ಟುನಿಟ್ಟಿನ ಆದೇಶ ಮಾಡಬೇಕು. ಮತ್ತು ಉತ್ತಮವಾಗಿರುವಂತಹ ಕಬ್ಬನ್ನು ಸಾಗಾಣೆ ಮಾಡಲು ನಾಲ್ಕು ಗ್ಯಾಂಗ್‌ಗಳು ಇರುತ್ತವೆ. ಆದರೆ ಸಣ್ಣ ಪ್ರಮಾಣದ ಕಬ್ಬಿಗೆ ಗ್ಯಾಂಗ್‌ಗಳು ಬರುತ್ತಿಲ್ಲ. ಮತ್ತು ಗ್ಯಾಂಗಿನವರು ಪ್ರತಿ ಎಕರೆಗೆ ಕನಿಷ್ಠ 5 ರಿಂದ 6 ಸಾವಿರ ರೂ. ಲಗಾಣಿ ಕೇಳುತ್ತಾರೆ. ಇದರಿಂದ ತುಂಬ ತೊಂದರೆಯಾಗಿದೆ. ಆದ್ದರಿಂದ ಎಲ್ಲ ಪ್ರಮಾಣದ ಕಬ್ಬನ್ನು ಸಾಗಿಸಲು ಕಡ್ಡಾಯವಾಗಿ ಗ್ಯಾಂಗ್‌ನನ್ನು ಒದಗಿಸಬೇಕು. ಒಂದು ವೇಳೆ ಸಾಧ್ಯವಾಗದಿದ್ದರೆ ಕಾರ್ಖಾನೆ ವತಿಯಿಂದ ಕಬ್ಬು ಕಟಾವು ಮಶೀನನ್ನು ರೈತರಿಗೆ ಒದಗಿಸಿಕೊಡಬೇಕೆಂದು ಆಗ್ರಹಿಸಿದ್ದಾರೆ.

ಸೋಮೇಶ ನಾಗರೆಡ್ಡಿ, ಶಿವನಗೌಡ ಮೇಟಿ, ಸತೀಶ ಸಜ್ಜನ ಸೇರಿದಂತೆ ಅನೇಕರಿದ್ದರು.

ಸಾರವಾಡದ ದ್ಯಾಮವ್ವದೇವಿ ದೇವಸ್ಥಾನ ಉದ್ಘಾಟನೆ ಮತ್ತು ಜಾತ್ರೆಯಲ್ಲಿ ಪಾಲ್ಗೊಂಡ ಸಚಿವ ಎಂ.ಬಿ.ಪಾಟೀಲ ಸ್ಪಷ್ಟನೆ

# ಬರವನ್ನು ಸಮರ್ಥವಾಗಿ ಎದುರಿಸುತ್ತಿರುವ ಸರಕಾರ



**ಉದಯರಶ್ಮಿ ನ್ಯೂಸ್**

ವಿಜಯಪುರ: ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು ಇಂದು ಸೋಮವಾರ ಬಬಲೇಶ್ವರ ತಾಲೂಕಿನ ಸಾರವಾಡ ದ್ಯಾಮವ್ವದೇವಿ ಮತ್ತು ವಿಜಯಪುರ ನಗರದ ಬುರಣಾಪುರ ರಸ್ತೆಯಲ್ಲಿರುವ ಘತ್ತರಗಿ ಭಾಗಮ್ಮ ದೇವಿಯ ಜಾತ್ರೆಯಲ್ಲಿ ಪಾಲ್ಗೊಂಡು ದೇವಿಯ ಆಶೀರ್ವಾದ ಪಡೆದರು.

ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮದಲ್ಲಿ ನಡೆಯುತ್ತಿರುವ ದ್ಯಾಮವ್ವದೇವಿ ದೇವಸ್ಥಾನದ ಉದ್ಘಾಟನೆ ಮತ್ತು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡ ಸಚಿವರು ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಾರವಾಡ ಗ್ರಾಮಸ್ಥರು ಸಚಿವರನ್ನು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವ ಎಂ. ಬಿ. ಪಾಟೀಲ ಅವರು, ದೇಶದಲ್ಲಿ ಈಗ ಐದಾರು ರಾಜ್ಯಗಳು ಭೀಕರ ಬರದಿಂದ ತತ್ತರಿಸಿವೆ. ನಮ್ಮ ರಾಜ್ಯದಲ್ಲಿಯೂ ಬರಗಾಲ ಉಂಟಾಗಿದ್ದು, ವಿಜಯಪುರ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ತಾಲೂಕುಗಳು ಎಂದು ಘೋಷಣೆ ಮಾಡಲಾಗಿದೆ. ರಾಜ್ಯ ಸರಕಾರ ಬರವನ್ನು ಸಮರ್ಥವಾಗಿ ಎದುರಿಸುತ್ತಿದ್ದು, ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳುತ್ತಿದೆ. ಇಲ್ಲಿನ ದ್ಯಾಮವ್ವದೇವಿ ಎಲ್ಲರಿಗೂ ಆಯುಷ್ಯ, ಆರೋಗ್ಯ ನೀಡಲಿ. ನಾಡಿನಲ್ಲಿ ಉತ್ತಮ ಮಳೆ ಬಂದು, ಬೆಳೆ ಸಮೃದ್ಧವಾಗಿರುವಂತೆ ಆಶೀರ್ವಾದ ಮಾಡಿ ನಮ್ಮೆಲ್ಲರನ್ನು ಕರುಣಿಸಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಾರವಾಡ ಗ್ರಾಮದ ಹಿರಿಯರಾದ ಕಲ್ಲಯ್ಯ ಲೋಕಯ್ಯ ಹಿರೇಮಠ, ಸದಾಶಿವ ಚಿಕರಡ್ಡಿ, ಮಲ್ಲಣ್ಣ ಕೋಟಿ, ದುಂಡಪ್ಪ ಕೋಟಿ, ಶಿವಪ್ಪ ಕೋಟಿ, ಚಂದ್ರಕಾಂತ ವಾಲಿ, ಶಿವಪ್ಪ ಬಡಿಗೇರ, ದುಂಡಪ್ಪ ಕೋಟಿ, ಪ್ರಭು ಕೋಟಿ, ಸಿದ್ರಾಮಪ್ಪ ಬಿದರಿ, ರಾಜಶೇಖರ ಇನಾಮದಾರ, ರುದ್ರಗೌಡ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಸಚಿವರು ವಿಜಯಪುರ ನಗರದ ಹೊರವಲಯದ ಬುರಣಾಪುರ ರಸ್ತೆಯಲ್ಲಿ ಬಿ. ಎಸ್. ಬಿರಾದಾರ ಅವರ ಸ್ಟೋನ್ ಕ್ರಷರ್ ನಲ್ಲಿ ನಡೆಯುತ್ತಿರುವ ಶ್ರೀ ಘತ್ತರಗಿ ಭಾಗ್ಯವಂತಿದೇವಿಯ 15ನೇ ವರ್ಷದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡರು. ದೇವಿಯ ದರ್ಶನ ಪಡೆದರು. ಅಲ್ಲದೇ, ಅಲ್ಲಿಯೇ ಉಪಸ್ಥಿತರಿದ್ದ ಜಮಖಂಡಿ ತಾಲೂಕಿನ ಆಲಗೂರಿನ ಪಂಚಮಸಾಲಿ ಜಗದ್ಗುರು ಪೀಠದ ಜಗದ್ಗುರು ಡಾ. ಮಹಾದೇವ ಶಿವಾಚಾರ್ಯರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ದೇವಸ್ಥಾನದ ವತಿಯಿಂದ ಸಚಿವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ಮುಖಂಡರಾದ ಬಿ. ಎಸ್. ಬಿರಾದಾರ, ಸಿದರಾಯ ಆಡಿನ, ಎಸ್. ಸಿ. ಚಿಕರಡ್ಡಿ, ಎಂ. ಆರ್. ಪಾಟೀಲ ಬಳ್ಳೊಳ್ಳಿ, ನಂದೆಗೋಳ ಮುಂತಾದವರು ಉಪಸ್ಥಿತರಿದ್ದರು.

### ಆರೆಸ್ಸೆಸ್ ನಗರ ವಾರ್ಷಿಕೋತ್ಸವ । ಉತ್ತರ ಕರ್ನಾಟಕ ಪ್ರಾಂತ ಪ್ರಚಾರಕ ನರೇಂದ್ರ ಸ್ಪಷ್ಟನೆ

# ದುಷ್ಟಶಕ್ತಿಗಳು ಭಾರತದತ್ತ ನೋಡದಂತೆ ಮಾಡುವುದೇ ಆರೆಸ್ಸೆಸ್ ಧ್ಯೇಯ

**ಉದಯರಶ್ಮಿ ನ್ಯೂಸ್**



ವಿಜಯಪುರ: ಕೊರೊನಾದಂಥ ಅನೇಕ ವೈರಸ್ ನಮ್ಮ ಜೊತೆಗಿದ್ದು ಜಾತಿಗಳ ನಡುವೆ ವಿಘಟನೆ ಮತ್ತು ಹಿಂದೂ ಸಮಾಜದಲ್ಲಿ ಒಡಕು ಮೂಡಿಸುವ ಪ್ರಯತ್ನ ಮಾಡುತ್ತವೆ ಎಂದು ಆರ್ ಎಸ್ ಎಸ್ ಉತ್ತರ ಕರ್ನಾಟಕ ಪ್ರಾಂತ ಪ್ರಚಾರಕ ನರೇಂದ್ರ ಹೇಳಿದ್ದಾರೆ.

ನಗರದ ದರಬಾರ ಹೈಸ್ಕೂಲ್ ಮೈದಾನದಲ್ಲಿ ಆರ್ ಎಸ್ ಎಸ್ ನಗರ ವಾರ್ಷಿಕೋತ್ಸವದ ಅಂಗವಾಗಿ ನಡೆದ ಸಾರ್ವಜನಿಕ ಸಭೆಯಲ್ಲಿ ಅವರು ಮಾತನಾಡಿದರು.

ಹಿಂದೂ ಎಂಬುದು ಕೇವಲ ಮೆರವಣಿಗೆಯ ಘೋಷಣೆಗೆ ಸೀಮಿತವಾಗಬಾರದು. ಪ್ರತಿದಿನ ಹಿಂದೂ ಆಗಬೇಕು. ಹಿಂದೂ ಸಮಾಜ ಎಷ್ಟು ಬೇಗ ಸಂಘಟಿತವಾಗುತ್ತದೆಯೋ ಅಷ್ಟೇ ಸಮಯದಲ್ಲಿ ಗುಂಪುಗಳಾಗಿ ವಿಭಜನೆಯಾಗುತ್ತದೆ. ಇದು ಸಮಾಜಕ್ಕೆ ದೊಡ್ಡ ಸವಾಲಾಗಿದೆ. ದುಷ್ಟಶಕ್ತಿಗಳು ಈ ರೀತಿಯ ಸವಾಲುಗಳನ್ನು ಭಾರತದಲ್ಲಿ ಯಾವಾಗಲೂ ಇರಿಸುತ್ತಿರುತ್ತವೆ. ಅವುಗಳನ್ನು ನಾವು ಸಂಘಟಿತರಾಗಿ ಸಮರ್ಥವಾಗಿ ಎದುರಿಸಬೇಕಿದೆ ಎಂದು ಹೇಳಿದರು.

ಅಧಿಕಾರಿಯೊಬ್ಬರನ್ನು ನಾವು ಕರೆದು ಚಹಾ ಕುಡಿಸುತ್ತೇವೆ. ಆದರೆ ಪೌರ ಕಾರ್ಮಿಕ ಬಂಧುಗಳನ್ನು ಕರೆದು ಚಹಾ ಕುಡಿಸುತ್ತೇವೆಯೇ? ಈ ಕಾರಣಕ್ಕಾಗಿಯೇ ಅವರು ರಾಬರ್ಟ್ ಮೊದಲಾದ ಹೆಸರುಗಳನ್ನು ಪಡೆಯುವಂತೆ ಮಾಡುತ್ತಿದ್ದೇವೆ. ಅನೇಕ ವೈರುದ್ಯಗಳು ಎದುರಿಸುತ್ತಿರುವ ಪ್ರಪಂಚದ ಎಲ್ಲ ಸಮಸ್ಯೆಗಳಿಗೆ ಭಾರತ ಆಶಾಕಿರಣ ಮತ್ತು ಪರಿಹಾರವಾಗಿದೆ. ಭಾರತದ ವಸುದೈವ ಕುಟುಂಬಕಂ ಎಂಬ ಧ್ಯೆಯವೇ ಇಡೀ ಜಗತ್ತನ್ನು ಕೇಂದ್ರಿಕರಿಸುತ್ತಿದೆ. ಹೀಗಾಗಿ ಎಲ್ಲ ದೇಶಗಳನ್ನು ಸಕ್ಷಮ ಮಾರ್ಗದಲ್ಲಿ ಸಾಗಿಸಬೇಕಾದ ಆದ್ಯ ಜವಾಬ್ದಾರಿ ಭಾರತದ ಮೇಲಿದೆ. ಕೊರೊನಾ ಸಂದರ್ಭದಲ್ಲಿ ಅನೇಕ ರಾಷ್ಟ್ರಗಳು ಕೋವಿಡ್ ಲಸಿಕೆ ಕಪಾಟಿನಲ್ಲಿರಿಸಿಕೊಂಡಿದ್ದವು. ಆದರೆ, ಭಾರತ ಮಾತ್ರ ಲಸಿಕೆಗಳನ್ನು ಬೇರೆ ಬಡ ರಾಷ್ಟ್ರಗಳಿಗೂ ನೀಡಿ ಮಾನವೀಯತೆ ಮೆರೆದಿದೆ ಎಂದು ಅವರು ಹೇಳಿದರು.

ಭಾರತ ಮಾತೆ ಜಗತ್ತಿನ ಸಿಂಹಾಸನದ ಮೇಲೆ ಆನಂದದಿಂದ ವಿರಾಜಮಾನವಾಗುವಂತೆ ಮಾಡುವುದು, ದುಷ್ಟಶಕ್ತಿಗಳು ನಮ್ಮ ಭಾರತದತ್ತ ಕಣ್ಣೆತ್ತಿ ನೋಡದಂತೆ ಮಾಡುವುದು ಆರ್ ಎಸ್ ಎಸ್ ಪ್ರಮುಖ ಧ್ಯೇಯವಾಗಿದೆ. ದೇಶಭಕ್ತಿ ಒಂದು ಸ್ವಭಾವವಾಗಬೇಕು. ಈ ಸ್ವಭಾವವನ್ನೇ ಬೆಳೆಸುವುದೂ ಸಂಘದ ಕರ್ತವ್ಯ ಎಂದು ಅವರು ಹೇಳಿದರು.

ಸಂವಿಧಾನ ಸಮರ್ಪಣೆ ಸಂದರ್ಭದಲ್ಲಿ ಡಾ. ಬಾಬಾಸಾಹೇಬರು ತಮ್ಮ ಭಾಷಣದಲ್ಲಿ ಅನೇಕ ಸಂದರ್ಭದಲ್ಲಿ ಹಿಂದೂ ಸಮಾಜ ಒಂದಾಗಲಿಲ್ಲ. ಇದು ಮತ್ತೆ ಎಲ್ಲಿ ಮರಕಳುಸುತ್ತಿದ್ದೇಯೋ ಎಂಬ ಆತಂಕ ಹೊರಹಾಕಿದ್ದರು. ಮೊಘಲ್ ಆಕ್ರಮಣ, ಆಂಗ್ಲರ ಆಳ್ವಿಕೆ ಹೀಗೆ ಅನೇಕ ವಿಷಯ ಉಲ್ಲೇಖಿಸಿ ಹಿಂದೂ ಸಮಾಜ ಒಂದಾಗಲಿಲ್ಲ ಎಂಬ ಆಂತಕವನ್ನು ಡಾ. ಬಾಬಾಸಾಹೇಬರು ಅಂದೇ ವ್ಯಕ್ತಪಡಿಸಿದ್ದರು. ಮಹಾಭಾರತ ಯುದ್ಧದ ನಂತರ ಅನೇಕ ವೈಭವದಿಂದಾಗಿ ಹಿಂದೂ ಸಮಾಜ ಕಂಗೊಳಿಸಿತ್ತು. ಆದರೆ, ನಂತರ ತನ್ನನ್ನು ತಾನು ಮರೆತುಕೊಂಡಿತು. ಇದರಿಂದ ಹಿಂದೂ ಸಮಾಜದ ಮೇಲೆ ಆಕ್ರಮಣ ಮಾಡುವಂತಾಯಿತು. ನಿರಂತರ ಆಕ್ರಮಣದಿಂದಾಗಿ ಉಂಟಾದ ಅನೇಕ ಬಿರುಕುಗಳನ್ನು ಸರಿಮಾಡಲು ನಮ್ಮ ಸಾಧು- ಸಂತರು ಸಕ್ರಿಯವಾಗಿ ಕೆಲಸ ಮಾಡಿದ್ದಾರೆ. ಒಳಜಗಳ, ಮೇಲು-ಕೀಳು ಎಂಬ ಮನೋಭಾವದಿಂದಾಗಿ ಹಿಂದೂ ಸಮಾಜಕ್ಕೆ ಭವಿಷ್ಯವಿಲ್ಲ ಎಂದು ಅನೇಕರು ಭಾವಿಸಿದ್ದರು, ಆದರೆ ಅಂದು ತರುಣ ಯುವಕ ಡಾ. ಹೆಗಡೆವಾರ ಆರ್ ಎಸ್ ಎಸ್ ಸ್ಥಾಪಿಸಿ ಹಿಂದೂ ಸಮಾಜಕ್ಕೆ ಎದುರಾಗಿದ್ದ ಕೊರತೆಯನ್ನು ನೀಗಿಸಿದರು ಎಂದು ನರೇಂದ್ರ ಹೇಳಿದರು.

ನಗರದ ಖ್ಯಾತ ವೈದ್ಯ ಡಾ. ರಮೇಶ ಮಾನಕರೆ ಮಾತನಾಡಿ, ಹಿಂದೂಗಳನ್ನು ಒಗ್ಗೂಡಿಸಿ ಹಿಂದೂ ರಾಷ್ಟ್ರ ನಿರ್ಮಾಣವೇ ಆರ್ ಎಸ್ ಎಸ್ ಧ್ಯೇಯವಾಗಿದ್ದು, ಹಿಂದೂ ಸಂಸ್ಕೃತಿಯೇ ಆರ್ ಎಸ್ ಎಸ್ ಉಸಿರಾಗಿದೆ. ಸತ್ಯ, ಒಳ್ಳೆಯ ನಡತೆ, ಪ್ರೀತಿ, ಶಾಂತಿ ತತ್ವಗಳು ಹಿಂದೂ ಧರ್ಮದ ಸಂಹಿತೆಗಳಾಗಿವೆ. ಪ್ರಕೃತಿ ವಿಕೋಪ ಸಂದರ್ಭದಲ್ಲಿ ಸ್ವಯಂ ಸೇವಕರು ಸದಾ ಸೇವೆಯಲ್ಲಿ ಮುಂಚೂಣಿಯಲ್ಲಿರುತ್ತಾರೆ. ಇದು ಅವರ ಸೇವಾ ಬದ್ಧತೆಗೆ ಸಾಕ್ಷಿಯಾಗಿದೆ. ಝಾರ್ಖಂಡ್ ರಾಜ್ಯದಲ್ಲಿ ಹಿಂದುಳಿದ ಪ್ರದೇಶವೊಂದರಲ್ಲಿ ಆರ್ ಎಸ್ ಎಸ್ ಸ್ವಯಂ ಸೇವಕರು ಮಾಡಿದ ಸಮಾಜ ಸೇವೆ ಅನನ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಚಿದಂಬರ ಕರಮಣಕರ, ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ, ಮಾಜಿ ಶಾಸಕ ರಮೇಶ ಭೂಸನೂರ, ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಚಂದ್ರಶೇಖರ ಕವಟಗಿ, ಉಮೇಶ ಕಾರಜೋಳ, ಡಾ. ಬಾಬು ರಾಜೇಂದ್ರ ನಾಯಕ ಸೇರಿದಂತೆ ಸಾವಿರಾರು ಗಣವೇಷಧಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಜಗತ್ತಿನಲ್ಲಿಯೇ ಶ್ರೇಷ್ಠ ಸಂವಿಧಾನ ನಮ್ಮದು :ಪ್ರಕಾಶ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ತಾಲ್ಲೂಕು ಆಡಳಿತ, ಪಟ್ಟಣ ಪಂಚಾಯಿತಿ ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಸಂವಿಧಾನ ದಿನಾಚರಣೆ ಜರುಗಿತು.

ಪಟ್ಟಣದ ಅಂಬೇಡ್ಕರ ವೃತ್ತದಲ್ಲಿ ಭಾನುವಾರ ತಹಶೀಲ್ದಾರ್ ಪ್ರಕಾಶ ಸಿಂದಗಿ ಸಂವಿಧಾನ ದಿನಾಚರಣೆ ಅಂಗವಾಗಿ ಸಂವಿಧಾನ ಪೀಠಿಕೆ ಓದುವುದರ ಮೂಲಕ ಪ್ರತಿಜ್ಞಾವಿಧಿ ಭೋಧಿಸಿ ಮಾತನಾಡಿದರು. ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠವಾದ ಸಂವಿಧಾನ ನಮ್ಮದಾಗಿದೆ. ಪ್ರತಿಯೊಂದು ಅಂಶಗಳು ನಮಗೆ ಮಾದರಿಯಾಗಿವೆ. ಸರ್ಕಾರ ನಡೆಸುವ ಪ್ರತಿಯೊಬ್ಬ ನಾಗರೀಕನಿಗೂ ಅನ್ವಯವಾಗುವ ಹಕ್ಕು ಮತ್ತು ಕರ್ತವ್ಯಗಳ ಕುರಿತು ಸಂವಿಧಾನ ಮಾಹಿತಿ ನೀಡುತ್ತದೆ. ಇಂತಹ ಸಂವಿಧಾನ ರಚನೆ ಮಾಡಿದ ಮಹನೀಯರೆಲ್ಲರಿಗೂ ನಾವು ಕೃತಜ್ಞರಾಗಿರಬೇಕು. ಸಂವಿಧಾನ ರಚನೆಯಲ್ಲಿ ಅಂಬೇಡ್ಕರ ಅವರ ಸೇವೆ ಶ್ಲಾಘನೀಯವಾಗಿದೆ. ಇಂತಹ ಸಂವಿಧಾನವನ್ನು ಸಂರಕ್ಷಣೆ ಮಾಡುವ ಕಾರ್ಯ ನಮ್ಮ ಮೇಲಿದೆ ಎಂದರು.

ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಅಶೋಕ ಹೆಗಡೆ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ, ಸದಸ್ಯರಾದ ರಮೇಶ ಮಸಬಿನಾಳ, ಶಾಂತಯ್ಯ ಜಡಿಮಠ, ಬಶೀರ್ ಅಹ್ಮದ್ ಮಳಖೇಡ, ಕಾಸುಗೌಡ ಬಿರಾದಾರ(ಜಲಕತ್ತಿ), ಕಾಶೀನಾಥ ಬಜಂತ್ರಿ, ಸಿಂಧೂರ ಡಾಲೇರ, ಕಾಶೀನಾಥ ಜಮಾದಾರ, ಅಂಬೇಡ್ಕರ್ ಸುಧಾರಣಾ ಸಮೀತಿ ಅಧ್ಯಕ್ಷ ಕಾಶೀನಾಥ ತಳಕೇರಿ, ರಮೇಶ ಮ್ಯಾಕೇರಿ, ಭೀಮಪ್ಪ ಗುಡಿಮನಿ, ರಾಜಕುಮಾರ ಸಿಂದಗೇರಿ, ದಯಾನಂದ ರಾಠೋಡ, ಶಿಕ್ಷಕ ಎಸ್.ಆರ್.ಪಾಟೀಲ ಹಾಗೂ ಪಟ್ಟಣ ಪಂಚಾಯಿತಿ ಸಿಬ್ಬಂದಿ ಇದ್ದರು.

### ಬೇನಾಳದಲ್ಲಿ ಶಾಲಾ ಕೊಠಡಿ ಉದ್ಘಾಟನೆ । ಕಬಡ್ಡಿ ಪಂದ್ಯಾವಳಿಗೆ ಚಾಲನೆ

# ಬೇನಾಳದಲ್ಲಿ ಭಾವೈಕ್ಯತೆಯೇ ಉಸಿರು :ಸಚಿವ ಶಿವಾನಂದ

**ಉದಯರಶ್ಮಿ ನ್ಯೂಸ್**



ಆಲಮಟ್ಟಿ: ನನ್ನ ಮತಕ್ಷೇತ್ರದ ಸರ್ವ ಗ್ರಾಮಗಳನ್ನು ಭಾವೈಕ್ಯತೆಯ ಗ್ರಾಮಗಳನ್ನಾಗಿ ನಿರ್ಮಾಣ ಮಾಡಲು ಪ್ರಯತ್ನಿಸುತ್ತಿದ್ದರೆ, ಭಾವೈಕ್ಯತೆಯನ್ನೇ ತನ್ನ ಉಸಿರನ್ನಾಗಿ ಜೀವಿಸುತ್ತಿರುವ ಪ್ರಗತಿ ಗ್ರಾಮ ಎಂದರೇ ಅದು ಬೇನಾಳ, ಆ ಗ್ರಾಮದ ಶಾಸಕನಾಗಿರುವುದಕ್ಕೂ ನಾನು ಹೆಮ್ಮೆ ಪಡುತ್ತೇನೆ ಎಂದು ಜವಳಿ, ಎಪಿಎಂಸಿ ಮತ್ತು ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಸಮೀಪದ ಬೇನಾಳ ಆರ್ ಎಸ್ ಗ್ರಾಮದಲ್ಲಿ ಶನಿವಾರ ರಾತ್ರಿ ಅಲ್ಲಿಯ ಸರ್ಕಾರಿ ಪ್ರಾಥಮಿಕ ಶಾಲೆಯ ಎರಡು ಹೆಚ್ಚುವರಿ ಕೊಠಡಿಗಳು ಉದ್ಘಾಟನೆ ಹಾಗೂ ಟಿಪ್ಪು ಸುಲ್ತಾನ್ ಯುವಕ ಸಂಘ ಟಿಪ್ಪು ಸುಲ್ತಾನ ಮತ್ತು ಭಕ್ತ ಕನಕದಾಸ ಜಯಂತಿ ನಿಮಿತ್ತ ಹಮ್ಮಿಕೊಂಡ ರಾಜ್ಯ ಮಟ್ಟದ 55 ಕೆಜಿಯೊಳಗಿನ ಕಬಡ್ಡಿ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ ಮಾತನಾಡಿ, ಬೇನಾಳ ಗ್ರಾಮ ಹಲವು ಸಂಸ್ಕೃತಿಕ ವಿಶಿಷ್ಠತೆಯ ತಾಣ, ಗ್ರಾಮದ ಅಭಿವೃದ್ಧಿಗೆ ಇಡೀ ಗ್ರಾಮವೇ ಪ್ರಯತ್ನಿಸಿ, ನಾನಾ ಕಾಮಗಾರಿಗಳನ್ನು ಮಂಜೂರಿ ಮಾಡಿಸಿಕೊಂಡ ಮಾದರಿ ಗ್ರಾಮ ಎಂದರು. ಶಾಲೆಯ ಶ್ರೇಯೋಭಿವೃದ್ಧಿಗೆ ಗ್ರಾಮಸ್ಥರು ಕೂಡಾ ಕೈಜೋಡಿಸಬೇಕು ಎಂದು ಮನವಿ ಮಾಡಿದರು. ಕ್ರೀಡೆಯಲ್ಲಿ ಸೋಲು ಗೆಲುವು ಸಹಜ, ಯಾರೆ ಗೆದ್ದರೂ ಕ್ರೀಡೆ ಗೆಲ್ಲುತ್ತದೆ ವಿನಃ ತಂಡವಲ್ಲ ಎಂದರು. ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ನಾರಾಯಣ ದಾಸರ ಮಾರ್ಗದರ್ಶನದಲ್ಲಿ ಹಲವು ವಿದ್ಯಾರ್ಥಿಗಳು ಪ್ರತಿ ವರ್ಷದಲ್ಲಿ ರಾಜ್ಯ ಮಟ್ಟದವರೆಗೂ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಬಸವರಾಜ ಹಂಚಲಿ ಉಪನ್ಯಾಸ ನೀಡಿ ಮಾತನಾಡಿ, ಐಕ್ಯತೆ, ಹಿರಿಯರ ಮಾರ್ಗದರ್ಶನ, ಒಗ್ಗಟ್ಟು ಬೇನಾಳ ಗ್ರಾಮದ ಮುಖ್ಯ ಅಸ್ತ್ರ ಎಂದರು.

**ಸ್ಮಾರ್ಟ್ ಕ್ಲಾಸ್ ಶೀಘ್ರ:**

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿಡಗುಂದಿ ತಾಲ್ಲೂಕು ಘಟಕದ ಅಧ್ಯಕ್ಷ ಎಂ.ಎಸ್. ಮುಕಾರ್ತಿಹಾಳ ಹಾಗೂ ಪ್ರಧಾನಕಾರ್ಯದರ್ಶಿ ಸಲೀಂ ದಡೆದ ಅವರ ಮನವಿಗೆ ಸ್ಪಂದಿಸಿದ ಬೇನಾಳ ಗ್ರಾಮದ ಶಾಲೆಗೆ ಶೀಘ್ರದಲ್ಲಿಯೇ ಸ್ಮಾರ್ಟ್ ಕ್ಲಾಸ್ ಅಳವಡಿಸಲಾಗುವುದು ಎಂದು ಸಚಿವ ಪಾಟೀಲ ಸ್ಪಷ್ಟ ಭರವಸೆ ನೀಡಿದರು.

ಸಚಿವ ಶಿವಾನಂದ ಪಾಟೀಲ ನೇತೃತ್ವದ ಅಧಿಕಾರಿಗಳ ತಂಡ ಹಾಗೂ ಶಿಕ್ಷಕರ ಸಂಘದ ರಾಜ್ಯ ಘಟಕದ ಪ್ರಧಾನಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ ನೇತೃತ್ವದ ಶಿಕ್ಷಕರ ತಂಡದ ಮಧ್ಯೆ 15 ನಿಮಿಷಗಳ ಕಾಲ ಕಬಡ್ಡಿ ಆಡಿದ್ದು ಗಮನಸೆಳೆಯಿತು.

ಈ ಸಂದರ್ಭದಲ್ಲಿ ಕೆಎಂಎಫ್ ನಿರ್ದೇಶಕ ಗುರು ಚಲವಾದಿ, ನಿಡಗುಂದಿ ತಹಶೀಲ್ದಾರ್ ಎ.ಡಿ. ಅಮರವಾಡಗಿ, ಬಿಇಓ ವಸಂತ ರಾಠೋಡ, ಗ್ರಾಮ ಪಂಚಾಯ್ತಿ ಅಧ್ಯಕ್ಷ ರಮೇಶ ವಂದಾಲ, ಜಿ.ಸಿ. ಮುತ್ತಲದಿನ್ನಿ, ಗ್ಯಾನಪ್ಪಗೌಡ ಬಿರಾದಾರ, ಬಿ.ಎಚ್. ಗಣಿ, ಬುಡ್ಡೇಸಾಬ್ ಬಾಗವಾನ, ಎಂ.ಡಿ. ಫತ್ತೇಪುರ, ಟಿ.ಎಸ್. ಬಿರಾದಾರ, ಜಬ್ಬಾರ್ ಕೋಟ್ಯಾಳ, ಸಿ.ಬಿ. ಕಲ್ಲೋಲ, ಶಿಕ್ಷಕರ ಸಂಘದ ಅಧ್ಯಕ್ಷ ಮಹಾಂತೇಶ ಮುಕಾರ್ತಿಹಾಳ, ಪ್ರಧಾನಕಾರ್ಯದರ್ಶಿ ಸಲೀಂ ದಡೆದ,, ಮುತ್ತು ಬಡಿಗೇರ, ಮಹೇಶ ಗಾಳಪ್ಪಗೋಳ, ಟಿಪ್ಪು ಸುಲ್ತಾನ ಯುವಕ ಸಂಘದ ಅಧ್ಯಕ್ಷ ಮಹಮ್ಮದ್ ಬೇದ್ರೇಕರ ಇದ್ದರು.

### ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಸಂವಿಧಾನ ಅರಿವಿಗಾಗಿ ಮ್ಯಾರಥಾನ್ ಓಟ

# ಸಂವಿಧಾನ ಉಳಿಸುವುದು ನಮ್ಮೆಲ್ಲರ ಕರ್ತವ್ಯ :ಶಾಸಕ ಮನಗೂಳಿ

**ಉದಯರಶ್ಮಿ ನ್ಯೂಸ್**



ಸಿಂದಗಿ: ಈ ದೇಶವನ್ನು ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ರಾಷ್ಟ್ರೀಯತೆಯಿಂದ ಸಾಮಾಜಿಕ ತಳಹದಿಯ ಮೇಲೆ ಕಟ್ಟಬೇಕು ಎಂಬ ಆಶಯದೊಂದಿಗೆ ಭಾರತದ ಸಂವಿಧಾನವನ್ನು ಡಾ. ಬಿ.ಆರ್. ಅಂಬೇಡ್ಕರ ಅವರು ನಮಗೆಲ್ಲ ನೀಡಿದ್ದಾರೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದಲ್ಲಿ ಪೈ ಸ್ಪೋರ್ಟ್ಸ್ ಅಸೋಷಿಯೇಶನ್ ಹಾಗೂ ಗಣೇಶ ಕನ್ಸ್ಟ್ರಕ್ಷನ್ ಸಹಯೋಗದಲ್ಲಿ ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಸಂವಿಧಾನ ಅರಿವಿಗಾಗಿ ಓಟ ಎಂಬ ಶೀರ್ಷಿಕೆಯ ಅಡಿಯಲ್ಲಿ ಹಮ್ಮಿಕೊಂಡ ಮ್ಯಾರಥಾನ್ ಓಟ ಕಾರ್ಯಕ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದು ಸಂವಿಧಾನವನ್ನು ಉಳಿಸಬೇಕಾಗಿರುವುದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ. ಇಂದು ನಾವು ಸಂವಿಧಾನದ ಪೀಠಿಕೆಯ ವಿಧಿ ಓದಿದಂತೆ ಅದನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಜೀವನ ಸಾಗಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ತಾಲೂಕಾಡಳಿತ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಂವಿಧಾನದ ಪಿತಾಮಹ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಗೌರವ ಸಲ್ಲಿಸಿದರು. ಬಳಿಕ ತಾಲೂಕಾ ದಂಡಾಧಿಕಾರಿ ಪ್ರದೀಪಕುಮಾರ ಹಿರೇಮಠ ಸಂವಿಧಾನ ಪೀಠಿಕೆಯನ್ನು ಭೋದಿಸಿದರು.

ಇದೇ ಸಂದರ್ಭದಲ್ಲಿ ರಾಜಶೇಖರ ಕೂಚಬಾಳ ಪ್ರಾಸ್ತಾವಿಕವಾಗಿ ಮಾತನಾಡಿ, ವಿವಿಧತೆಯಲ್ಲಿ ಏಕತೆ ಬರುವಂತಹ ಸಂವಿಧಾನವನ್ನು ಡಾ.ಬಾಬಾಸಾಹೇಬ ಅಂಬೇಡ್ಕರ ಅವರು ನೀಡಿದ್ದಾರೆ. ಇಂದಿನ ಕಾಲ ಘಟದಲ್ಲಿ ಸಂವಿಧಾನವನ್ನು ಸಂರಕ್ಷಣೆ ಮಾಡಿಕೊಳ್ಳುವ ಅವಶ್ಯಕತೆಯಿದೆ. ಇಂದು ಸಂವಿಧಾನ ಅರಿವಿಗಾಗಿ ಓಟ ಹಮ್ಮಿಕೊಂಡಿರುವಂತಹದ್ದು ನಮ್ಮತನವನ್ನು ನಾವು ಉಳಿಸಿಕೊಳ್ಳಲು ಈ ಓಟವಿದೆ. ಪರಿಶಿಷ್ಟ ಜನಾಂಗದ ಅನುಧಾನ ಬಳಸಿಕೊಳ್ಳಲು, ಶಿಕ್ಷಣ ಹಾಗೂ ಬದುಕಲು ಈ ಓಟವಿದೆ. ಈ ಸಮಯದಲ್ಲಿ ನಮ್ಮ ಹಕ್ಕುಗಳನ್ನು ಪಡೆದುಕೊಳ್ಳಲು ಸಾಕಷ್ಟು ಪ್ರಯಾಸ ಪಡಬೇಕಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಪುರುಷರ ವಿಭಾಗದ 5ಕಿ.ಮೀ ಮ್ಯಾರಾಥಾನ್ ಓಟದಲ್ಲಿ ಕೃಷ್ಣಾ ರಾಠೋಡ 14.55 ಸೆಕೆಂಡಗಳಲ್ಲಿ ಪೂರ್ಣಗೊಳಿಸಿ ಪ್ರಥಮ ಸ್ಥಾನ ಪಡೆದರೆ, ಅಮೀರ ಕೋತವಾಲ್ 15.12ಸೆಕೆಂಡನಲ್ಲಿ ಓಟ ಪೂರ್ಣಗೊಳಿಸಿ ದ್ವಿತಿಯ ಸ್ಥಾನ ಪಡೆದರು. ಪ್ರಥಮ ಸ್ಥಾನ ಪಡೆದವರಿಗೆ ಗುತ್ತಿಗೆದಾರ ಮುತ್ತು ಮುಂಡೇವಾಡಗಿ ನೀಡಿದ 25000, ರೂ. ಪ್ರಥಮ ಬಹುಮಾನವನ್ನು ಮುತ್ತು ಸೊನ್ನದ ನೀಡಿದರು. ದ್ವಿತೀಯ ಬಹುಮಾನವನ್ನು ಭಾಗ್ಯಶ್ರೀ ಏಜೇನ್ಸಿಯ ಮಾಲೀಕ ಅನಂತ ದೇವರಡ್ಡಿ 11000 ರೂ.ಗಳು ನೀಡಿ ಸನ್ಮಾನಿಸಿದರು.

ಮಹಿಳಾ ವಿಭಾಗದ 3ಕಿ.ಮೀ ಮಹಿಳಾ ಮ್ಯಾರಾಥಾನ್ ಓಟದಲ್ಲಿ ಆರ್.ಡಿ.ಪಾಟೀಲ ಕಾಲೇಜಿನ ವಿದ್ಯಾರ್ಥಿ ಐಶ್ವರ್ಯ ಬಿಜ್ಜರಗಿ ಪ್ರಥಮ ಸ್ಥಾನ ಪಡೆದರೆ, ದ್ವಿತೀಯ ಸ್ಥಾನವನ್ನು ಅಶ್ವಿನಿ ಹುನಗುಂಟಿ ಪಡೆದುಕೊಂಡರು. ಪ್ರಥಮ ಸ್ಥಾನ ಪಡೆದವರಿಗೆ ರಮೇಶ ಹೂಗಾರ 10ಸಾವಿರ ರೂ. ನಗದು ಬಹುಮಾನ, ದ್ವಿತೀಯ ಸ್ಥಾನ ಪಡೆದವರಿಗೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಎನ್.ಎಸ್.ಭೂಸಗೊಂಡ 5ಸಾವಿರ ರೂ. ನಗದು ಬಹುಮಾನ ನೀಡಿ ಸನ್ಮಾನಿಸಿದರು. ಮ್ಯಾರಾಥನ್ ಓಟದಲ್ಲಿ ಭಾಗಿಯಾದ ಓಟಗಾರರಿಗೆ ಯುವ ಉದ್ಯಮಿ ವೆಂಕಟೇಶ ಗುತ್ತೇದಾರ ಸಮವಸ್ತ್ರವನ್ನು ನೀಡಿದರು.

ಈ ವೇಳೆ ತಾಲೂಕು ಪಂಚಾಯತ ಇಓ ರಾಮು ಅಗ್ನಿ, ಕ್ಷೇತ್ರ ಶಿಕ್ಷಣಾಧಿಕಾರಿ ಆರೀಫ್ ಬಿರಾದಾರ, ಡಾ.ಅನೀಲ ನಾಯಕ, ನಿವೃತ್ತ ದೈಹಿಕ ಶಿಕ್ಷಕ ಕೆ. ಎಚ್. ಸೋಮಾಪೂರ ವೇದಿಕೆಯ ಮೇಲಿದ್ದರು.

ಕಾರ್ಯಕ್ರಮದಲ್ಲಿ ಪರಸುರಾಮ ಕೂಚಬಾಳ, ಶಮ್ಮಾ ಮಂದ್ರುಪ, ಪ್ರವೀಣ ಹೋಸಮನಿ, ನಿಂಗರಾಜ ಗುಡಿಮನಿ, ಮುತ್ತು ತಳ್ಳೊಳ್ಳಿ, ರಮೇಶ ನಡುವಿನಕೇರಿ, ಸಿದ್ದು ಮ್ಯಾಕೇರಿ, ಬಾಲಕೃಷ್ಣ ಛಲವಾದಿ, ದಸಗೀರ ಆಳಂದ, ಶ್ರೀಮಂತ ಚೌರ, ಡಾ.ಅಂಬರೀಷ ಬಿರಾದಾರ ಸೇರಿದಂತೆ ಮ್ಯಾರಥಾನ್ ಓಟಗಾರರು, ಸಾರ್ವಜನಿಕರು ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅನುಯಾನಿಗಳು, ಅಭಿಮಾನಿಗಳು ಉಪಸ್ಥಿತರಿದ್ದರು.

ಶಿವಾನಂದ ಆಲಮೇಲ ನಿರೂಪಿಸಿ ವಂದಿಸಿದರು.

# ನೇಗಿನಾಳದಲ್ಲಿ ಬಾಲ ವಿಕಾಸ ಮತ್ತು ಪಾಲಕರ ಸಭೆ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಾಲಕರು ತಮ್ಮ ಮಕ್ಕಳನ್ನು ಸರಿಯಾಗಿ ಶಾಲೆಗೆ ಕಳುಹಿಸಬೇಕು. ಅವರ ವಿದ್ಯಾಭ್ಯಾಸಕ್ಕೆ ಸದಾ ಪ್ರೋತ್ಸಾಹ ನೀಡಬೇಕೆಂದು ನೇಗಿನಾಳದ ಕೆಬಿಎಲ್ಪಿಎಸ್ ಮುಖ್ಯಗುರು, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಾನಂದ ಮಂಗಾನವರ ಹೇಳಿದರು.

ತಾಲೂಕಿನ ನೇಗಿನಾಳ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಶನಿವಾರ ಜರುಗಿದ ಬಾಲ ವಿಕಾಸ ಸಮಿತಿ ಹಾಗೂ ಪಾಲಕರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪಾಲಕರು ತಮ್ಮ ಮಕ್ಕಳಿಗೆ ಪೌಷ್ಠಿಕ ಆಹಾರ ನೀಡುವ ಕಡೆಗೆ ಆದ್ಯತೆ ಕೊಡುವ ಮೂಲಕ ಅವರ ಆರೋಗ್ಯದ ರಕ್ಷಣೆ ಮಾಡಬೇಕು. ಸರ್ಕಾರದ ಯೋಜನೆಗಳನ್ನು ನೇರವಾಗಿ ಫಲಾನುಭವಿಗಳಿಗೆ ತಲುಪುವಂತೆ ಮಾಡುವಲ್ಲಿ ಅಂಗನವಾಡಿ ಕೇಂದ್ರಗಳ ಪಾತ್ರ ಬಹುಮುಖ್ಯವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಭಾರತಿ ಸಜ್ಜನ ಮಾತನಾಡಿ, ಮಕ್ಕಳ ಶಿಕ್ಷಣ ಮತ್ತು ಆರೋಗ್ಯದ ಕಡೆಗೆ ಅಂಗನವಾಡಿ ಕಾರ್ಯಕರ್ತೆಯರು ಗಮನಹರಿಸಬೇಕೆಂದರು.

ಅಧ್ಯಕ್ಷತೆಯನ್ನು ಡೋಣೂರ ಗ್ರಾಮ ಪಂಚಾಯಿತಿ ಸದಸ್ಯೆ -ಶೀಮಾ ಬಿಜಾಪುರ ವಹಿಸಿದ್ದರು. ಸಭೆಯಲ್ಲಿ ಮಹಿಬೂಬ ದುಂಡಸಿ, ಶಮಶುದ್ದೀನ ಕುಡಚಿ, ಮಹಿಬೂಬ ಮುಲ್ಲಾ, ಅದಮ ಪರೂತಾಬಾದ, ಶೋಭ ಚವ್ಹಾಣ, ರಾಜಾಮಾ ಪರೂತಾಬಾದ, ನೀಲಮ್ಮ ಮಠ ಇತರರು ಇದ್ದರು.

ರಜಿಯಾ ಡೋಣೂರ ಸ್ವಾಗತಿಸಿ, ವಂದಿಸಿದರು.

# ಸರ್ವಜ್ಞ ವಿದ್ಯಾಪೀಠದಲ್ಲಿ ಸಂವಿಧಾನ ದಿನಾಚರಣೆ

**ಉದಯರಶ್ಮಿ ನ್ಯೂಸ್**



ತಾಳಿಕೋಟಿ: ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ತಾಳಿಕೋಟಿಯಲ್ಲಿ ಸಂವಿಧಾನ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರ ರವರು, ಸಂವಿಧಾನದ ಆಚರಣೆ ಮತ್ತು ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ದೈಹಿಕ ಶಿಕ್ಷಕ ಬಸವರಾಜ ಚಳ್ಳಗಿ ವಿದ್ಯಾರ್ಥಿಗಳಿಗೆ ಸಂವಿಧಾನದ ಪೂರ್ವ ಪೀಠಿಕೆಯನ್ನು ಪಟಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಗುರು ಸಂತೋಷ ಪವಾರ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ, ಭೀಮನಗೌಡ ಸಾಸನೂರ, ಸಂಗಮೇಶ ಬಿರಾದಾರ, ಗಿರೀಶ ಎಚ್, ಸಿದ್ದನಗೌಡ ಮುದ್ನೂರ, ಶೀವಲೀಲಾ ಚುಂಚೂರ, ಮಿನಾಕ್ಷಿ ರಜಪೂತ,ಸಂಗೀತಾ ಬಿರಾದಾರ, ಜಯಶ್ರೀ ಮಕಾಶಿ, ಲಕ್ಷ್ಮೀ ಚುಂಚೂರ, ಸಂಗೀತಾ ನಾಯ್ಕು, ಭಾಗ್ಯಶ್ರೀ ಗಿರಿನಿವಾಸ, ವಿದ್ಯಾಶ್ರೀ ಗಿರಿನಿವಾಸ, ಸರ್ವ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಇದ್ದರು.

# ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ

**ಉದಯರಶ್ಮಿ ದಿನಪತ್ರಿಕೆ**ಸಿಂದಗಿ:



ಪಟ್ಟಣದ ಬಸವ ನಗರದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಸಹ ಗೌರಿ ಹುಣ್ಣಿಮೆಯ ನಿಮಿತ್ಯ ಲಕ್ಷ್ಮೀ ಜಾತ್ರಾ ಮಹೋತ್ಸವದಲ್ಲಿ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯವನ್ನು ಸ್ಥಳೀಯ ನಿವಾಸಿಗಳು, ಗುರು-ಹಿರಿಯರು ನಡೆಸಿಕೊಂಡು ಬರಲಾಗುತ್ತಿದೆ ಎಂದು ಮಳೇಂದ್ರ ಕತ್ತಿ ಹೇಳಿದರು.

ಈ ವೇಳೆ ಬಾಬು ರಾಠೊಡ, ವೆಂಕಟೇಶ ಕಾಂಬಳೆ, ತಾಜು ಕೋಳಕುರ, ಜಿ.ಸಿ. ಸಂಗಾಲಕ್, ಹಸನ್ ಮಂದೇವಾಲಿ, ರಾಹುಲ್ ಪಾಟೀಲ, ಅಜಯ ಯಲಗಟ್ಟಿ, ರಾಜು ಸ್ಥಾವರಮಠ, ಮಲ್ಲು ಸದುಗೋಳು, ಲಕ್ಕಪ್ಪ ದೇವಣಗಾವ ಸೇರಿದಂತೆ ಮಹಿಳೆಯರು ಮತ್ತು ಸ್ಥಳೀಯರು ಇದ್ದರು.

# ನ.೨೯ರಂದು ತನು ಕನ್ನಡ–ಮನ ಕನ್ನಡ ಪ್ರಶಸ್ತಿ ಪ್ರದಾನ ಸಮಾರಂಭ

ಉದಯರಶ್ಮಿ ನ್ಯೂಸ್

ವಿಜಯಪುರ: ಸಮಾಜ ಸೇವೆಯ ಮೂಲಕ ಗುರುತಿಸಿಕೊಂಡಿರುವ ವಿಜಯಪುರ ನಗರದ ತನು ಫೌಂಡೇಶನ್ ಪ್ರತಿ ವರ್ಷ ರಾಜ್ಯೋತ್ಸವವನ್ನು ಆಚರಿಸುವುರೊಂದಿಗೆ ಕನ್ನಡ ನಾಡು ನುಡಿ ಸೇರಿದಂತೆ ನಾಡಿನ ವಿವಿಧ ಕ್ಷೇತ್ರಗಳಿ ತಮ್ಮ ಅನುಪಮ ಸೇವೆ ಸಲ್ಲಿಸಿದ ವ್ಯಕ್ತಿಗಳನ್ನು ಗುರುತಿಸಿ ತನು ಕನ್ನಡ ಮನ ಕನ್ನಡ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತದೆ. ಅರ್ದಯ ಈ ವರ್ಷದ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಇದೇ ತಿಂಗಳ 29 ನೇ ತಾರೀಖಿನಂದು ನಗರದ ಕಂದಗಲ್ ಹಣಮಂತ್ರಾಯ ರಂಗಮಂದಿರದಲ್ಲಿ ಆಯೋಜಿಸಲಾಗಿದ್ದು, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹೆಲೆನ್ ಮೈಸೂರು, ಪುಷ್ಪಾ ಹಿರೇಮಠ, ಡಾ॥ಪ್ರವೀಣ ಬಗಲಿ, ವೀರೇಶ ವಾಲಿ, ಶ್ರೀವಿಜಯಕುಮಾರ ಮಮದಾಪುರ, ಡಾ.ಸುರೇಶ ಲೋಣಿ, ಮಹಾಂತೇಶ ಮಾಹೂರ, ನಾಶಿ ದಂಪತಿಗಳು, ಸಿದ್ಧಣ್ಣ ವಿಜಾಪುರ, ಸಿದ್ರಾಮ ಅಗಸರ, ಕುಮಾರ ಅಮಾತೆಪ್ಪ ಪೂಜಾರಿ, ವಿಎಸ್‌ಜಿ ಗ್ರೂಪ್ ಪ್ರಶಸ್ತಿಯನ್ನು ಪಡೆದುಕೊಳ್ಳಲಿದ್ದಾರೆ. ಅನಿತಾ ಕೆ.ಆರ್ ಪೇಟೆ, ಗಿರೀಶ ಇಟ್ಟಂಗಿ, ಸೋಮನಾಥ ವಾಲಿಕಾರ, ಪ್ರೇಮ ಚಲವಾದಿ, ಧನ ಲಕ್ಷ್ಮಿ ದೊಡಮನಿ, ಸುರೇಶ ಜತ್ತಿ, ಸಂಗನಬಸವರಾಜ ಗೂಡ್ಲುಮನಿ ವಿಶೇಷ ಸನ್ಮಾನ ಪಡೆದುಕೊಳ್ಳಲಿದ್ದಾರೆ.

ಇಂಡಿಯ ರಿಸರ್ವ ಬೆಟಾಲಿಯನ್ ಕಮಾಂಡೆಂಟ್ ಎನ್. ಬಿ.ಮೆಳ್ಳೆಗಟ್ಟಿ, ಡಾ.ಶರಣ ಮಳಖೇಡ್ಕರ್, ವಿಜಯಲಕ್ಷ್ಮೀ ಬಾಳಿ, ಈರಣ್ಣ ಪಟ್ಟಣಶೆಟ್ಟಿ, ರಾಜೇಶ್ವರಿ ಜುಗತಿ, ಮಲ್ಲಿಕಾರ್ಜುನ ಬೃಂಗೀಮಠ, ಜೆ.ಹೆಚ್.ಮಣ್ಣೂರ, ಕಬೂಲ್ ಕೊಕಟನೂರ, ಡಾ.ಸನ್ಮತಿ ಕುರುಂದವಾಡೆ, ಪ್ರತಿಭಾ ಪಾಟೀಲ್, ಪ್ರದೀಪ ಅಂಗಡಿ ಉಪಸ್ಥಿತರಿರುತ್ತಾರೆ ಎಂದು ಫೌಂಡೇಷನ್ ಅಧ್ಯಕ್ಷ ವಿಜುಗೌಡ ಕಾಳಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಗವಾನ ಬುದ್ಧರ ಅಂತಿಮ ಉಪದೇಶ & ಡಾ.ಬಾಬಾಸಾಹೇಬ ಅಂಬೇಡ್ಕರ ಕೊನೆಯ ಸಂದೇಶ” ಕೃತಿಗಳ ಬಿಡುಗಡೆ

# ಕೃತಿಗಳ ಅಂಶಗಳನ್ನು ಅರ್ಥೈಸಿ ಅನುಸರಿಸಿ :ಚಂದ್ರಶೇಖರ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: “ಭಗವಾನ ಬುದ್ಧರ ಅಂತಿಮ ಉಪದೇಶ ಮತ್ತು ಡಾ.ಬಾಬಾಸಾಹೇಬ ಅಂಬೇಡ್ಕರವರ ಕೊನೆಯ ಸಂದೇಶ” ಎಂಬ ಪುಸ್ತಕ ಇಂದು ಬಿಡುಗಡೆಯಾಗುತ್ತಿರುವುದು ಅತ್ಯಂತ ಸೂಕ್ತ ಹಾಗೂ ಸಮಯೋಚಿತವಾಗಿದೆ ಎಂದು ವಿಶ್ವರತ್ನ ಬುದ್ಧ ವಿಹಾರ ಟ್ರಸ್ಟ್ ಅಧ್ಯಕ್ಷ ಚಂದ್ರಶೇಖರ ಕಡಕೋಳಕರ್ ಹೇಳಿದರು.

ತಾಲ್ಲೂಕಿನ ಕಡಕೋಳ ಗ್ರಾಮದ ವಿಶ್ವರತ್ನ ಬುದ್ಧವಿಹಾರ ಹೊಸಕಾಲೋನಿ, ಚೇತವನದಲ್ಲಿ ವಿಶ್ವರತ್ನ ಬುದ್ಧವಿಹಾರ ಟ್ರಸ್ಟ್ ಇವರ ಸಹಯೋಗದಲ್ಲಿ ಭಾನುವಾರ ಜರುಗಿದ ಪುಸ್ತಕ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಂದು ನಾವು ಸಾಕಷ್ಟು ಗ್ರಂಥ, ಪುಸ್ತಕಗಳನ್ನು ನೆಮ್ಮದಿಗಾಗಿ ಓದಿ ಮರೆಯುತ್ತಿದ್ದೇವೆ. ಆದರೆ ವಾಸ್ತವಿಕವಾಗಿ ಅವುಗಳಲ್ಲಿನ ಅಂಶಗಳನ್ನು ಅಥ–



ರ್ೈಸಿ ಅದರಂತೆ ನಡೆಯುವುದನ್ನು ರೂಢಿಸಿಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಇಂದಿನ ಪುಸ್ತಕ ಉತ್ತಮ ಅಂಶಗಳ ಸಂಗ್ರಹವಾಗಿದೆ ಎಂದರು.

ಸಿಂದಗಿ ಮಾಜಿಶಾಸಕ ಶರಣಪ್ಪ ಸುಣಗಾರ ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿ, ಮಾತನಾಡುತ್ತಾ, ಬುದ್ಧವಿಹಾರ ನಿರ್ಮಿತ ತಾಣದಲ್ಲಿಯೇ ಇಂದು ಭಗವಾನ ಬುದ್ಧರ ಅಂತಿಮ ಉಪದೇಶಗಳನ್ನು ಹೊತ್ತ ಹೊತ್ತಿಗೆ ಬಿಡುಗಡೆ ಮಾಡುತ್ತಿರುವುದು ಅತ್ಯಂತ ಸಕಾಲಿಕ. ಇಂಥ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವು ಮೂಲಕ ಇಲ್ಲಿನ ಬಳಗ ಎಲ್ಲರಿಗೂ ಮಾದ–ರಿಯಾಗಿದೆ ಎಂದರು.

ಕರ್ನಾಟಕ ಜಾನಪದ ವಿ.ವಿ ಗೊಟಗೋಡಿಯ ಕುಲಪತಿ ಡಾ.ಟಿ. ಎಂ.ಭಾಸ್ಕರ್, ಸಹಾಯಕ ಪ್ರಾಧ್ಯಾಪಕ ಡಾ.ಅಭಿಲಾಷ ಎಚ್.ಕೆ, ಲೇಖಕ ಹಣಮಂತ ಗುಡ್ಡಳ್ಳಿ ಮಾತನಾಡಿದರು,

ನಂತರ ಸಾಂಕೇತಿಕವಾಗಿ ಪುಸ್ತಕ ಬಿಡುಗಡೆ ಮಾಡಲಾಯಿತು.

ಅಶೋಕಮಿತ್ರ ಪ್ರಶಸ್ತಿ ಪುರಸ್ಕೃತ ಯುವರಾಜ ಕಾಂಬಳೆ, ದಲಿತ ವಿದ್ಯಾರ್ಥಿ ಪರಿಷತ್ ರಾಜ್ಯಾಧ್ಯಕ್ಷ ಶ್ರೀನಾಥ ಪೂಜಾರಿ, ರಂಗಕರ್ಮಿ ಸಿದ್ಧರಾಮ ಹಿಪ್ಪರಗಿ, ದೊಡ್ಡಾಟ ಕಲಾವಿದ ರಮೇಶ ಕರಬಸಮ್ಮನವರ, ಶಿಕ್ಷಕ ಚಂದ್ರಶೇಖರ ಯಲರಡ್ಡಿ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮೀತಿಯ ಜಿಲ್ಲಾ ಸಂಘಟನಾ ಸಂಚಾಲಕ ವೈ.ಸಿ.ಮಯೂರ, ಸಹಸಂಚಾಲಕ ಪ್ರಕಾಶ ಗುಡಿಮನಿ, ಸಂಗನಗೌಡ ತೆಗ್ಗಿನಮನಿ, ಪರಶುರಾಮ ದಿಂಡವಾರ, ಖಾಜು ಗುಡ್ಡಳ್ಳಿ ಸೇ–ರಿದಂತೆ ಬರಹಗಾರರು, ಸಾಹಿತ್ಯ ಪ್ರೇಮಿಗಳು ಇದ್ದರು.

# ಸಿಂದಗಿ ಹಸಿವು ಮುಕ್ತ ನಗರವಾಗಿಸುವ ಉದ್ದೇಶ :ಮೌಲಾನಾ ದಾವುದ

ಉದಯರಶ್ಮಿ ನ್ಯೂಸ್

ವಿಜಯಪುರ: ಅಖಿಲ ಭಾರತ ಮಾನವೀಯತೆ ಸಂದೇಶ ವೇದಿಕೆ ವತಿಯಿಂದ ನಗರದ ಆಸ್ಪತ್ರೆಯಲ್ಲಿ ಹಾಗೂ ಪ್ರಮುಖ ಓಣಿಗಳಲ್ಲಿ ಹಸಿವು ಮುಕ್ತ ನಗರವನ್ನಾಗಿಸುವ ಉದ್ದೇಶದಿಂದ ಸಂಜಯ ಆಹಾರ ವಿತರಿಸಲಾಯಿತು.

ಈ ಸಂದರ್ಭ ಸ್ಥಳೀಯ ವೇದಿಕೆಯ ಅಧ್ಯಕ್ಷ ಮೌಲಾನಾ ದಾವುದ ನದ್ವ ಹಾಗೂ ಪದಾಧಿಕಾರಿಗಳು ಮಾತನಾಡಿ, ಇಂದಿಗೂ ನಮ್ಮ ನೆರೆಹೊರೆಯಲ್ಲಿ ಹಸಿವಿನಿಂದ ಮಲಗುವ ಇಂತಹ ಅನೇಕ ಕುಟುಂಬಗಳು ಮತ್ತು ಜನರು ಇದ್ದಾರೆ ಎಂಬುದು ಬಹಳ ವಿಷಾದದ ಸಂಗತಿಯಾಗಿದೆ, ಅವರಿಗೆ ಆಹಾರ ಮತ್ತು ಸೇವೆ ಸಲ್ಲಿಸುವುದು ಒಂದು ದೊಡ್ಡ ಪುಣ್ಯದ ಕಾರ್ಯವಾಗಿದೆ. ನಾವು ನಮ್ಮ ಸಹೋದರರು, ದೇಶವಾಸಿಗಳು ಮತ್ತು ದೇಶದ ಬಗ್ಗೆ




ಕಾಳಜಿ ವಹಿಸಬೇಕು. ಪ್ರತಿಯೊಬ್ಬರನ್ನು ಪ್ರೀತಿಸಬೇಕು. ಕಷ್ಟದಲ್ಲಿರುವವರಿಗೆ ಹಸಿದವರಿಗೆ, ಸಹಾಯ ಮಾಡಬೇಕು. ಹಸಿವು ನಿಯಂತ್ರಿಸಿದರೆ, ನಮ್ಮ ಸಮಾಜವು ಅನೇಕ ಅಪರಾಧಗಳಿಂದ ಪಾರಾಗುತ್ತದೆ. ಉತ್ತಮ ಪರಿಸರ ಸ್ಥಾಪನೆಯಾಗುತ್ತದೆ. ಹಸಿವು ಒಂದು ದೊಡ್ಡ ವಿಷಯ. ಇದ–ರಿಂದಾಗಿ, ಮನುಷ್ಯನು ಭಿಕ್ಷೆ ಬೇಡುವ ಅನಿವಾರ್ಯತೆಗೆ ಸಿಲುಕುತ್ತಾನೆ. ಒಂದೊಂದು ಹೊತ್ತಿನ ಊಟಕ್ಕೂ ಹಾತೊರೆಯುತ್ತಾನೆ. ಇಂದು ನಾವು ನಮ್ಮ ಸ್ವಾರ್ಥ ಮತ್ತು ಸ್ವಹಿತಾಸಕ್ತಿಗೆ ಒಳಗಾಗುತ್ತೆವೆ ಎಂದು ವಿಷಾದ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮೌಲಾನಾ ಕಲೀಮುಲ್ಲಾ, ಫಿರೊಜ ಜನಾಬ ರಫೀಕ ಸಾದ, ಶಫೀಕ ಸಾಬ ಮತ್ತು ಇತರರಿದ್ದರು.

# ಸಿಂದಗಿ: ವಿವಿಧೆಡೆ ಸಂವಿಧಾನ ಸಮರ್ಪಣಾ ದಿನಾಚರಣೆ

ಉದಯರಶ್ಮಿ ನ್ಯೂಸ್



ಸಿಂದಗಿ: ಭಾರತದ ಸಂವಿಧಾನವು ವಿಶ್ವದ ಎಲ್ಲಾ ಸಂವಿಧಾನಗಳಿಗಿಂತ ಅತಿ ದೊಡ್ಡ ಲಿಖಿತ ಸಂವಿಧಾನವಾಗಿದೆ. ಸಂವಿಧಾನದಲ್ಲಿ ಪ್ರತಿಪಾದಿಸಿರುವ ಮೂಲಭೂತ ಕರ್ತವ್ಯಗಳ ಅರಿವು ಮೂಡಿಸುವ ಗುರಿಯನ್ನು ಈ ದಿನವು ಹೊಂದಿದೆ ಎಂದು ಪ್ರಾಚಾರ್ಯ ವಿಮಲಕಾಂತ ಪಾಟೀಲ ಹೇಳಿದರು.

ಪಟ್ಟಣದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಆರ್.ಡಿ.ಪಾಟೀಲ ಪದವಿ ಪೂರ್ವ ಕಲಾ,ವಾಣಿಜ್ಯ, ವಿಜ್ಞಾನ ಮಹಾವಿದ್ಯಾಲಯದಲ್ಲಿ ಜರುಗಿದ ಭಾರತದ ಸಂವಿಧಾನ ದಿನದ ಸಮಾರಂಭದಲ್ಲಿ ಅವರು ಮಾತನಾಡಿದ ಅವರು, ಭಾರತದ ಸಂವಿಧಾನವು ರಾಷ್ಟ್ರಕ್ಕೆ ಮಾರ್ಗದರ್ಶಿ ಪುಸ್ತಕವಾಗಿದೆ. ಕರ್ತವ್ಯಗಳು ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರಚನೆಯ ಆದ–ರವಾಗಿದೆ. ಭಾರತದ ಸಂವಿಧಾನವನ್ನು ಅಂಗೀಕರಿಸಿದ ನೆನಪಿಗಾಗಿ ಸಂವಿಧಾನ ದಿವಸ ಎಂದು ಕರೆಯಲಾಗುತ್ತದೆ ಎಂದರು.

ಈ ವೇಳೆ ಇಎಲ್‌ಸಿ ನೋಡಲ್ ಅಧಿಕಾರಿ ಎನ್.ಬಿ.ಪೂಜಾರಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಉಪನ್ಯಾಸಕರಾದ ಪಿ.ವ್ಹಿ.ಮಹಲಿನಮಠ, ಎಸ್.ಎಚ್.ಜಾಧವ, ಬಿ.ಬಿ.ಜಮಾದಾರ, ಪಿ.ಬಿ.ಜೋಗೂರ, ಡಾ.ಶರಣಬಸವ ಜೋಗೂರ, ಎಂ.ಐ.ಮುಜಾವರ, ಸುನೀಲ ಪಾಟೀಲ, ವ್ಹಿ.ಪಿ.ನಂದಿಕೋಲ, ಎನ್.ಎಂ.ಶೆಳ್ಳಗಿ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.

**ಪ್ರೇರಣಾ ಶಾಲೆ:**

ಪಟ್ಟಣದ ಆಲಮೇಲ ರಸ್ತೆಯ ಹೊರವಲಯದಲ್ಲಿರುವ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಆರ್. ಡಿ. ಕುಲಕರ್ಣಿ, ನಿರ್ದೇಶಕ ಪಿ.ಡಿ.ಕುಲಕರ್ಣಿ, ಶಾಲೆಯ ಮುಖ್ಯ ಗುರುಮಾತೆ ಎಸ್. ಆಯ್. ಅಸ್ಕಿ ಸೇರಿದಂತೆ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

**ಸಿಂದಗಿ ಹೆಸ್ಕಾಂ ಕಚೇರಿ:**

ಪಟ್ಟಣದ ಹೆಸ್ಕಾಂ ಉಪವಿಭಾಗದ ಕಛೇರಿಯಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಆಚರಣೆ ಮಾಡಲಾಯಿತು.

ಈ ವೇಳೆ ಎಸ್‌ಓ ಶಾಂತೂ ಬಿರಾದಾರ, ಸಿದ್ದಲಿಂಗ, ಪ್ರವೀಣ ಹಿರೇಕುರುಬರ, ನಾಗಪ್ಪ ನೂಲಾನವರ ಸೇರಿದಂತೆ ಹೆಸ್ಕಾಂ ಸಿಬ್ಬಂದಿಗಳು ಇದ್ದರು.

**ಸಂಗಮೇಶ್ವರ ವಿದ್ಯಾಲಯ:**

ಪಟ್ಟಣದ ಬಂದಾಳ ರಸ್ತೆಯಲ್ಲಿರುವ ಶ್ರೀ ಸಂಗಮೇಶ್ವರ ವಿದ್ಯಾಲಯದಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಆಚರಣೆ ಮಾಡಲಾಯಿತು.

ಈ ವೇಳೆ ಶಾಲೆಯ ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ಲೋಯಲ್ ಶಾಲೆ:**

ಪಟ್ಟಣದ ಕಲಬುರಗಿ ರಸ್ತೆಯ ಹೊರವಲಯದಲ್ಲಿರುವ ಲೊಯೋಲ ಶಾಲೆಯಲ್ಲಿ ಹಮ್ಮಿಕೊಂಡ ಭಾರತದ ಸಂವಿಧಾನ ಸಮರ್ಪಣಾ ದಿನವನ್ನು ಆಚರಿಸಲಾಯಿತು.

ಈ ವೇಳೆ ಕಾರ್ಯಕ್ರಮವನ್ನು ಉದ್ಘಾಟಿಸಿದ ಫಾದರ್ ಪ್ರಶಾಂತ ಸೆಕ್ವೇರಾ ನ್ಯಾಯವಾದಿ, ಫಾದರ್ ಫೀಟರ್ ಅಂತೋನಿ ಮಾತನಾಡಿದರು.

ಪ್ರಾಚಾರ್ಯ ಫಾದರ್ ಲ್ಯಾನ್ಸಿ ಫರ್ನಾಂಡಿಸ್, ಸಿಸ್ಟರ್ ಸೋಫಿಯಾ ಸೇರಿದಂತೆ ಶಾಲೆಯ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿದ್ದರು.

# ಭಾರತದ ಸಂವಿಧಾನ ವಿಶ್ವಕ್ಕೆ ಮಾದರಿ :ಜೈ ಭೀಮ

ಉದಯರಶ್ಮಿ ನ್ಯೂಸ್

ತಾಳಿಕೋಟಿ: ಭಾರತದ ಎಲ್ಲ ಪ್ರಜೆಗಳಿಗೆ ಸಾಮಾಜಿಕ ಸಮಾನತೆ ಆರ್ಥಿಕ ಭದ್ರತೆ ಮತ್ತು ರಾಜ–ಕೀಯ ಸ್ವಾತಂತ್ರ್ಯವನ್ನು ಕೊಡುವ ಉದ್ದೇಶದೊಂದಿಗೆ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಅಂತಃಕರಣದಿಂದ ರೂಪಿತವಾದ ಭಾರತದ ಸಂವಿಧಾನ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದು ದಲಿತ ಯುವ ಮುಖಂಡ ಜೈ ಭೀಮ ಮುತ್ತಗಿ ಹೇಳಿದರು.

ರವಿವಾರ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿರುವ ಉದ್ಯಾನವನದಲ್ಲಿ ಸಮಾಜ ಕಲ್ಯಾಣ ಇಲಾಖೆ. ತಾಲೂಕ ಆಡಳಿತ ಹಾಗೂ ಪುರಸಭೆಯ ಸಹಯೋಗದಲ್ಲಿ ಸಂವಿಧಾನ ದಿನದ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಂವಿಧಾನ ನಮಗೆ ಸರಳವಾಗಿ ಸಿಕ್ಕಿದ್ದಲ್ಲ ಇದರ ಹಿಂದೆ ಬಾಬಾಸಾಹೇಬರ ತ್ಯಾಗ



ಮತ್ತು ಪರಿಶ್ರಮ ಅಡಗಿದೆ ಬಾಬಾ ಸಾಹೇಬರು ಯಾವ ಕಾರಣಕ್ಕೂ ಸಂವಿಧಾನ ರಚನಾ ಸಮಿತಿಯಲ್ಲಿ ಬರಬಾರದೆಂದು ಕೆಲವು ಪಟ್ಟ ಭದ್ರ ಹಿತಾಸಕ್ತಿಗಳು ವ್ಯವಸ್ಥಿತವಾದ ಷಡ್ಯಂತರ ನಡೆಸಿದರು ತಮ್ಮ ಅಗಾಧವಾದ ಜ್ಞಾನ ಹಾಗೂ ದೂರದೃಷ್ಟಿ ಗುಣದಿಂದ ಬಾಬಾ ಸಾಹೇಬರು ಸಂವಿಧಾನ ರಚನಾ ಸಮಿತಿಗೆ ಆಯ್ಕೆಯಾದರು 5000 ವರ್ಷಗಳಿಂದ ನಿರಂತರವಾಗಿ ನಡೆಯುತ್ತಾ ಬಂದಿರುವ ಶೋಷಣೆಯನ್ನು ಕೇವಲ ಐವತ್ತು ವರ್ಷಗಳಲ್ಲಿ ನಿರ್ಮೂಲೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಇಂಥ–'ಹ ಮಹಾನ್ ದಾರ್ಶನಿಕನನ್ನು ಸ್ಮ–ರಿಸುವಂತಹ ಕೆಲಸ ಆಗಬೇಕಾಗಿದೆ ಅವರ ಆಸೆ ಈಡೇರಬೇಕಾದರೆ ಪ್ರತಿಯೊಬ್ಬರೂ ಅವರು ಕೊಟ್ಟು ಹೋದ ಈ ಮಹಾನ್ ಗ್ರಂಥದ ಅನುಸರಣೆಯನ್ನುಮಾಡುವುದು ಅಗತ್ಯವಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ತಹಶೀಲ್ದಾರ್ ಕೀರ್ತಿ ಚಾಲಕ್ ಅವರು ಡಾ. ಬಿ. ಆರ್. ಅಂಬೇಡ್ಕರ್ ಅವರ ಮೂರ್ತಿಗೆ ಪೂಜೆಯನ್ನು ಸಲ್ಲಿಸಿ ಪುಷ್ಪಾರ್ಚನೆ ಮಾಡಿ ನಂತರ ಎಲ್ಲರಿಗೂ ಸಂವಿಧಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಎನ್. ವಿ.ಕೋರಿ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಪುರಸಭೆ ಮುಖ್ಯ ಅಧಿಕಾರಿ ಮಹೇಶ ಜಾಧವ. ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್. ಬಿ. ಕಟ್ಟಿಮನಿ. ದಲಿತ ಮುಖಂಡ ಮುತ್ತಪ್ಪ ಚಮಲಾಪೂರ. ಪುರಸಭೆ ಸದಸ್ಯ ಪರಶುರಾಮ ತಂಗಡಗಿ. ಮಹೇಶ್ ಚಲವಾದಿ. ಗೋಪಾಲ ಕಟ್ಟಿಮನಿ. ಬಸ್ಸು ಕಟ್ಟಿಮನಿ. ಶಫೀಕ್ ಇನಾಮದಾರ. ಅಬೂಬಕರ ಲಾಹೋರಿ. ನದೀಮ ಕಡು. ಸಿಆರ್‌ಪಿಗಳಾದ ರಾಜು ವಿಜಾಪೂರ. ಲಕ್ಷ್ಮಣ ಬಾಗೇವಾಡಿ. ಬಾಲಾಜಿ ವಿಜಾಪುರ್ ಇಬ್ರಾಹಿಂ ಆಲ ಮೇಲ. ಬಿ ಆರ್ ಪಿ ಕಾಶಿನಾಥ್ ಸಜ್ಜನ. ಸಮಾಜ ಕಲ್ಯಾಣ ಇಲಾಖೆಯ ಎನ್. ವಿ. ಕೋರಿ. ಎಸ್. ಎಂ. ಕಲಬುರ್ಗಿ. ಎಸ್.ಎನ್.ಮಲ್ಲಾಡೆ ನಾಗರಾಜ್ ಗುಡಗುಂಟಿ .ವಿ. ಎನ್. ಮಾಳಗಿ. ಮಂಜುನಾಥ ನರಸಣಗಿ. ನವೀನ್ ಇಜೇರಿ ರಾಮನಗೌಡ ಬಂಟನೂರು ಮತ್ತಿತರರು ಇದ್ದರು.

# ಕುಡಿವ ನೀರಿನ ಕೊರತೆಗೆ ಕ್ರಮ :ಮನಗೂಳಿ

ಉದಯರಶ್ಮಿ ನ್ಯೂಸ್



ಸಿಂದಗಿ: ಆಲಮೇಲ ಮತ್ತು ಸಿಂದಗಿ ತಾಲೂಕಿನ ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಮುಂದಿನ ದಿನಗಳಲ್ಲಿ ಸಂಭವಿಸಬಹುದಾದ ಕುಡಿಯುವ ನೀರಿನ ಕೊರತೆಯನ್ನು ನಿವಾರಣೆ ಸೂಕ್ತ ವ್ಯವಸ್ಥೆಯನ್ನು ಮಾಡಿಕೊಳ್ಳಿ ಎಂದು ಶಾಸಕ ಅಶೋಕ ಮನಗೂಳಿ ಅಧಿಕಾ–ರಿಗಳಿಗೆ ಸೂಚಿಸಿದರು.

ಪಟ್ಟಣದ ತಾಲೂಕು ಪಂಚಾಯತ್ ಸಭಾಭವನದಲ್ಲಿ ಹಮ್ಮಿಕೊಂಡ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನ ವಿವಿಧ ಗ್ರಾಪಂ ವ್ಯಾಪ್ತಿಯ ಬಂದಾಳ, ಚಿಕ್ಕಸಿಂದಗಿ, ಬ್ಯಾಕೋಡ, ಬನ್ನೆಟ್ಟಿ, ಚಟ್ಟರಕಿ, ಚಾಂದಕವಟೆ, ಸುರುಗಿಹಳ್ಳಿ, ಹಿಕ್ಕನಗುತ್ತಿ, ನಾಗಾವಿ ಬಿ.ಕೆ, ಗೊರವಗುಂಡಗಿ, ವನಾಗಾವಿ ತಾಂಡಾ, ರಾಂಪುರ ಪಿಎ, ರಾಂಪುರ ತಾಂಡಾ, ಬೆನಕೊಟಗಿ, ಮತ್ತು ಆಲಮೇಲ ತಾಲೂಕಿನ ಬಗಲೂರ, ಶಿರಸಗಿ, ದೇವಣಗಾವ, ಕಡ್ಲೆವಾಡ, ಮಲಘಾಣ, ಸೋಮಜಾಳ, ಮಲಘಾಣ, ರಾಮನಹಳ್ಳಿ, ಗುಡ್ಡಳ್ಳಿ ಈ ಎಲ್ಲ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ತುರ್ತಾಗಿ ನೀರಿನ ಸಮಸ್ಯೆ ಎದುರಾಗದಂತೆ ಕ್ರಮಕೈಗೊಳ್ಳಬೇಕು ಎಂದು ಆಯಾ ಗ್ರಾಪಂನ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ತಾಪಂ ಇಓ ರಾಮು ಅಗ್ನಿ ಸಹಾಯಕ ನಿರ್ದೇಶಕ ನಿತ್ಯಾನಂದ ಯಲಗೋಡ, ಎ.ಎ ದುರ್ಗದ, ಮಂಜುನಾಥ್ ಸ್ವಾಮಿ, ವಿರುಪಾಕ್ಷಿ ನಾಡಗೌಡ, ಎ.ಎಚ್.ಯಾಳಗಿ ಸೇರಿದಂತೆ ಪಂಚಾಯತ್ ಅಭಿವೃದ್ಧಿ ಅಧಿಕಾ–ರಿಗಳು, ಕಾರ್ಯದರ್ಶಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

> “ಎಲ್ಲ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪ್ರಸ್ತುತವಾಗಿ ನೀರಿನ ಕೊರತೆ ಕಡಿಮೆಯಿದ್ದು ಹಾಗೂ ಮುಂಜಾಗ್ರತ ಕ್ರಮ ಕೈಗೊಳ್ಳುವಂತೆ ಮತ್ತು ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಸಮನ್ವಯ ಸಾಧಿಸಿ ತೊಂದರೆಯಾಗದಂತೆ ಕ್ರಮವಹಿಸಬೇಕು.”
>
> – ಶಾಸಕ ಅಶೋಕ ಮನಗೂಳಿ

### ಸಿಂದಗಿಯ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ–50ರ ಸಂಭ್ರಮ

# ಡಾ.ಅಂಬೇಡ್ಕರ್ ಓದಿನ ಪರಿ ಆದರ್ಶನೀಯ :ಸಾತಿಹಾಳ

ಉದಯರಶ್ಮಿ ನ್ಯೂಸ್

ಸಿಂದಗಿ: ಮಕ್ಕಳಿಗೂ ಹಕ್ಕುಗಳಿವೆ. ಮಕ್ಕಳ ಶೋಷಣೆಯ ವಿರುದ್ಧ ಪ್ರಶ್ನಿಸುವ ಹಕ್ಕುಗಳಿಗೆ ಸರ್ಕಾರ ಮನ್ನಣೆ ಇಡಬೇಕು ಎಂದು ಕೆರೂಟಗಿ ಸರಕಾರಿ ಪ್ರಾಥಮಿಕ ಶಾಲೆಯ ಮುಖ್ಯಗುರು ಎಸ್. ಎಸ್. ಸಾತಿಹಾಳ ಹೇಳಿದರು.

ಶನಿವಾರ ಸಾಯಂಕಾಲ ಪಟ್ಟಣದ ಆಲಮೇಲ ರಸ್ತೆಯ ಹೊರವಲಯದಲ್ಲಿರುವ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ–50ರ ಸಂಭ್ರಮದಲ್ಲಿ ಹಮ್ಮಿಕೊಂಡ ಮಕ್ಕಳ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪುಸ್ತಕಗಳು ನಮ್ಮನ್ನು ನೋಡಿ ಕಂಗಲಾಗಬೇಕೇ ವಿನಃ ನಾವು ಪುಸ್ತಕ ಕಂಡು ಹೆದರಬಾರದು. ಡಾ.ಬಿ.ಆರ್.ಅಂಬೇಡ್ಕರ್ ಓದಿನ ಪರಿ ಎಲ್ಲರಿಗೂ ಆದರ್ಶನೀಯ ಎಂದು ಮಕ್ಕಳಿಗೆ ಮನವರಿಕೆ ಮಾಡಿದರು. ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆ ಇತಿಮಿತಯಲ್ಲಿರಬೇಕು. ಪುಸ್ತಕ ಎಲ್ಲ ವಿವಿಧ ಭಾವನೆ, ಹಣ, ಕೀರ್ತಿ, ಸಂಪತ್ತು ಎಲ್ಲವನ್ನು ನೀಡುತ್ತದೆ ಎಂಬ ಕಿವಿಮಾತು ಹೇಳಿದರು.




ಈ ವೇಳೆ ವಕೀಲ ಬಿ.ಜಿ.ನೆಲ್ಲಗಿ ಮಕ್ಕಳಿಗಾಗಿರುವ ಕಾಯ್ದೆ–ಕಾನೂನುಗಳ ಕುರಿತು ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಆರ್.ಡಿ. ಕುಲಕರ್ಣಿ ಅಧ್ಯಕ್ಷೀಯ ನುಡಿಗಳನ್ನಾಡಿದರು.

ಮಕ್ಕಳ ದಿನಾಚರಣೆಯ ನಿಮಿತ್ತ ಹಮ್ಮಿಕೊಂಡ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಹಾಗೂ ಅಧ್ಯಯನ್ದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕ ಪಿ.ಡಿ ಕುಲಕರ್ಣಿ, ಶಾಲೆಯ ಮುಖ್ಯಗುರುಮಾತೆ ಸಾವಿತ್ರಿ ಅಸ್ಕಿ, ವಿದ್ಯಾ ಅಂಬಲಗಿ. ಸತೀಶ ಕುಲಕರ್ಣಿ, ದ್ರಾಕ್ಷಾಯಿಣಿ ಹುಗ್ಗಿ, ಸೇರಿದಂತೆ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

# ನ.29ರಿಂದ ಚರ್ಮರೋಗ ತಪಾಸಣೆ ಶಿಬಿರ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎವಿಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ ಕಾಯಚಿಕಿತ್ಸಾ ವಿಭಾಗದ ವತಿಯಿಂದ ನಾನಾ ಚರ್ಮರೋಗ ಕಾಯಿಲೆಗಳಿಗಾಗಿ ನವೆಂಬರ್ 29 ರಿಂದ ಡಿಸೆಂಬರ್ 2ರ ವರೆಗೆ ಉಚಿತ ತಪಾಸಣೆ ಶಿಬಿರ ಆಯೋಜಿಸಲಾಗಿದೆ.

ನಾಲ್ಕು ದಿನ ನಡೆಯಲಿರುವ ಈ ಶಿಬಿರದಲ್ಲಿ ನಾನಾ ರೀತಿಯ ಚರ್ಮರೋಗಗಳಾದ ಭಂಗು, ಮೊಡವೆ, ಚಿಬ್ಬು, ಗಜಕರ್ಣ, ಇಸುಬು, ಅಲರ್ಜಿಯಿಂದ ಅಗುವ ತುರಿಕೆ ಮುಂತಾದ ದೀರ್ಘಕಾಲಿನ ಚರ್ಮರೋಗಳಿಗೆ ಉಚಿತವಾಗಿ ತಪಾಸಣೆ ನಡೆಸಲಾಗುವುದು. ಸಾರ್ವಜನಿಕರು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕಾಗಿ ಕಾಲೇಜಿನ ಪ್ರಾಚಾರ್ಯ ಡಾ. ಸಂಜಯ ಕಡ್ಲಮಟ್ಟಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊ. ಸಂ: 9513397413, 7483278348 ಸಂಪರ್ಕಿಸಬಹುದಾಗಿದೆ.

# ದಾನ ದಾನಿಗಳನ್ನು ಅಜರಾಮರನನ್ನಾಗಿಸುತ್ತದೆ :ಸಿದ್ದಲಿಂಗ ಶ್ರೀ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ದೇವರು ನಮಗೆ ಚೆಂದವಾದ ಬದುಕು ನೀಡಿದ್ದಾನೆ. ಈ ಚೆಂದವಾದ ಬದುಕಿನಲ್ಲಿ ಯಾರು ದಾನ ಮಾಡುತ್ತಾರೋ ಅವರು ಅಳಿದು ಹೋದರೂ ಅವರ ಬದುಕು ಸಮಾಜದಲ್ಲಿ ಅಜರಾಮರವಾಗಿರುತ್ತದೆ. ಇದುವೇ ದಾನದ ಶ್ರೇಷ್ಠತೆ ಎಂದು ತಾಳಿಕೋಟಿ ಖಾಸ್ಗತೇಶ್ವರ ಮಠದ ಸಿದ್ದಲಿಂಗ ದೇವರು ಹೇಳಿದರು.

ಪಟ್ಟಣದ ವಿರಕ್ತಮಠದ ಶಿವಾನುಭವ ಮಂಟಪದಲ್ಲಿ ನಂದಿ ಸಾಹಿತ್ಯ ವೇದಿಕೆಯು ಭಾನುವಾರ ಹಮ್ಮಿಕೊಂಡಿದ್ದ ಸ್ಥಳೀಯ ಐತಿಹಾಸಿಕ ಬಸವೇಶ್ವರ ದೇವಾಲಯ ಜೀರ್ಣೋದ್ಧಾರಕ್ಕೆ 65 ವರ್ಷಗಳ ಹಿಂದೆ ದೇಣಿಗೆ ನೀಡಿದ ಮಹಾದಾನಿಗಳ ಸ್ಮರಣೆ ಹಾಗೂ ಅವರ ವಂಶಜರಿಗೆ ಸನ್ಮಾನ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ತಮ್ಮೊಳಗೆ ಇರುವ ಅಂಶವನ್ನು ಸಮಾಜಕ್ಕೆ ನೀಡುವವರು ನಿಜವಾಗಿ ದೊಡ್ಡವರು. ಪ್ರತಿಯೊಬ್ಬರಿಗೆ ಸಮಾಜ-ಕ್ಕೆ ಏನಾದರೂ ಕೊಡಬೇಕೆಂಬ ಭಾವ ಇರಬೇಕು. ಕೊಡುವ ಭಕ್ತಿ ದೊಡ್ಡದ್ದು. ಸಮಾಜಕ್ಕೆ ದಾನ ನೀಡಿರುವ ಅನೇಕ ದಾನಿಗಳ ಹೆಸರು ನಾಡಿನಲ್ಲಿ ಅಜರಾಮರವಾಗಿವೆ. 65 ವರ್ಷಗಳ ಹಿಂದೆ ಬಸವೇಶ್ವರ ದೇವಾಲಯಕ್ಕೆ ದಾನ ನೀಡಿದ ಮಹನೀಯರ ವಂಶಜರನ್ನು ಆಹ್ವಾನಿಸಿ ಅವರಿಗೆ ಗೌರವ ಸಲ್ಲಿಸುವ ಕಾರ್ಯ ಮಾಡುತ್ತಿರುವ ನಂದಿ ಸಾಹಿತ್ಯ ವೇದಿಕೆಯ ಕಾರ್ಯ ಸಾಥ-ರ್ಕತೆಯಿಂದ ಕೂಡಿದೆ. ಸಮಾಜದಲ್ಲಿ ಎಲ್ಲರೂ ಮನಸ್ಸುಗಳನ್ನು ಜೋಡಿಸುವ ಕಾರ್ಯ ಮಾಡಬೇಕಿದೆ. ಈ ಸಾಹಿತ್ಯ ವೇದಿಕೆಯಿಂದ ನಿರಂತರವಾಗಿ ಸಾಮಾಜಿಕ ಕಾರ್ಯಗಳು ನಡೆಯುವಂತಾಗಲಿ ಎಂದರು.

ಸಮಾರಂಭ ಉದ್ಘಾಟಿಸಿದ ಸಾಹಿತಿ ಶಂಕರ ಬೈಚಬಾಳ ಮಾತನಾಡಿ, ದಾನಿಗಳ ಸ್ಮರಣೆ ಮಾಡುವುದೇ ಒಂದು ಸುಖದ ಸಮುದ್ರವಿದ್ದಂತೆ. ಇಲ್ಲಿನ ದೇವಸ್ಥಾನ ಜೀರ್ಣೋದ್ಧಾರಕ್ಕೆ ಅನೇಕ ಮಹನೀಯರು ದೇಣಿಗೆ ನೀಡಿದ್ದಾರೆ. ದೇವಾಲಯದ ಒಳಗೆ ಗೋಡೆ, ದ್ವಾರಗಳ ಮೇಲೆ ದೇಣಿಗೆ ನೀಡಿದವರ ಹೆಸರನ್ನು ಅಂದವಾಗಿ ಕೆತ್ತಿರುವುದನ್ನು ಕಾಣುತ್ತೇವೆ. ವಾರದ ಮಲ್ಲಪ್ಪ, ಬಸರೀಗಿಡದ ವೀರಪ್ಪ, ಜೋಳದರಾಶಿ ದೊಡ್ಡನಗೌಡರ, ಬ್ಯಾಕೋಡ, ತೆಲಗಿ ವಸ್ತ್ರದವರು ಸೇ-ರಿದಂತೆ ಅನೇಕರು ದೇವಾಲಯದ ಜೀರ್ಣೋದ್ಧಾರಕ್ಕೆ ನೀಡಿದ ದೇಣಿಗೆಯನ್ನು ದೇವಾಲಯ ಸಂಸ್ಥೆಯ ಅಧ್ಯಕ್ಷರಾಗಿದ್ದ ಮಲ್ಲಪ್ಪ ಸಿಂಹಾಸನ ಅವರು ಪ್ರಾಮಾಣಿಕವಾಗಿ ಬಳಕೆ ಮಾಡಿ ದೇವಾಲಯದ ಜೀರ್ಣೋದ್ಧಾರ ಮಾಡುವ ಮೂಲ ಸ್ಮರಣೀಯರಾಗಿ ಉಳಿದುಕೊಂಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪಿಎಲ್ಡಿ ಬ್ಯಾಂಕಿನ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಹಿರಿಯರು ಮಾಡಿರುವ ಒಳ್ಳೆಯ ಕಾರ್ಯಗಳನ್ನು ಸಮಾಜ ಸ್ಮರಿಸಬೇಕು. ಈ ನಿಟ್ಟಿನಲ್ಲಿ ನಂದಿ ಸಾಹಿತ್ಯ ವೇದಿಕೆಯ ಅಧ್ಯಕ್ಷ ಮಹಾಂತೇಶ ಸಂಗಮ ಅವರು ಬಸವೇಶ್ವರ ದೇವಾಲಯಕ್ಕೆ ಸಂಬಂಧಿಸಿದಂತೆ ವಿವಿಧ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುವ ಮೂಲಕ ಇಂದಿನ ಯುವಜನಾಂಗಕ್ಕೆ ಹಿರಿಯರ ಶ್ರಮವನ್ನು ಪರಿಚಯ ಮಾಡುವ ಕಾರ್ಯ ಶ್ಲಾಘನೀಯ ಎಂದರು.

ನಂದಿ ಸಾಹಿತ್ಯ ವೇದಿಕೆಯ ಅಧ್ಯಕ್ಷ ಮಹಾಂತೇಶ ಸಂಗಮ ಮಾತನಾಡಿ, ವೇದಿಕೆಯ ಎಲ್ಲ ಪದಾಧಿಕಾರಿಗಳ ಸಹಕಾರದೊಂದಿಗೆ ಈ ಸಮಾರಂಭ ಆಯೋಜಿಸಲಾಗಿದೆ ಎಂದರು.

ಸಾನಿಧ್ಯ ವಹಿಸಿದ್ದ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಸನ್ಮಾನ ಸ್ವೀಕರಿಸಿದ ಪರವಾಗಿ ಡಾ.ರಾಜೇಂದ್ರ ಬಸರೀಗಿಡದ ಮಾತನಾಡಿದರು.

ವೇದಿಕೆಯಲ್ಲಿ ವೇದಿಕೆಯ ಸದಸ್ಯ ಪಿ.ಎ.ಓಲೇಕಾರ ಇದ್ದರು. ಬಸವೇಶ್ವರ ದೇವಾಲಯ ಜೀರ್ಣೋದ್ಧಾರಕ್ಕೆ ದೇಣಿಗೆ ನೀಡಿದ ಮಹನೀಯರ ವಂಶಜರಾದ ಲಿಂ.ಮಲ್ಲಪ್ಪ ಸಿಂಹಾಸನ ಅವರ ಮರಿ ಮೊಮ್ಮಗ ಪರುತಪ್ಪ ಸಿಂಹಾಸನ, ಜೋಳದರಾಶಿ ದೊಡ್ಡನಗೌಡರ ತಮ್ಮನ ಮಗ ಜೋಳದರಾಶಿ ಪಂಪನಗೌಡರ, ಬಸರೀಗಿಡದ ವೀರಪ್ಪನವರ ಮೊಮ್ಮಗ ಡಾ.ರಾಜೇಂದ್ರ ಬಸರೀಗಿಡದ, ಬ್ಯಾಕೋಡರವರ ಮರಿ ಮೊಮ್ಮಗ ಶಶಾಂಕ ಬ್ಯಾಕೋಡ, ಗುರುಬಸಯ್ಯ ವಸದ ಅವರ ಮಗ ಶಿವಾನಂದ ವಸದ ಅವರಿಗೆ ವೇದಿಕೆಯಿಂದ ಸನ್ಮಾನಿಸಲಾಯಿತು.

ಗೀತಾ ಘೋರ್ಪಡೆ ಪ್ರಾರ್ಥಿಸಿದರು. ಶಿವು ಮಡಿಕೇಶ್ವರ ಸ್ವಾಗತಿಸಿದರು. ಡಾ.ಮುರಗೇಶ ಸಂಗಮ ನಿರೂಪಿಸಿದರು. ಪಿ.ಜಿ.ಕುಲಕರ್ಣಿ ವಂದಿಸಿದರು.

# ಸಮಬಾಳು ಸಮಪಾಲು ತತ್ವದ ಸಂವಿಧಾನ :ನೇರಬೆಂಚಿ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ನಮ್ಮ ದೇಶದ ಸಂವಿಧಾನವು ಸಮಬಾಳು ಸಮಪಾಲು ತತ್ವದ ಮೇಲೆ ರೂಪಿತವಾಗಿದ್ದು ದೇಶದ ಪ್ರತಿಯೊಬ್ಬ ಬಡವ ಬಲ್ಲಿದನ ಅಭಿವೃದ್ಧಿಗೆ ಪೂರಕವಾಗಿದೆಯೆಂದು ಹಾರ್ವರ್ಡ್ ಪಿಯು ಸೈನ್ಸ ಕಾಲೇಜಿನ ಅಧ್ಯಕ್ಷ ಎಸ್.ಎಂ.ನೇರಬೆಂಚಿ ಹೇಳಿದರು.

ಪಟ್ಟಣದ ಹಾರ್ವರ್ಡ್ ಪಿಯು ಸೈನ್ಸ ಕಾಲೇಜಿನಲ್ಲಿ ಜರುಗಿದ ಸಂವಿಧಾನ ಸಮರ್ಪಣಾ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ನಮ್ಮ ಸಂವಿಧಾನ ಗ್ರಂಥವು ತುಂಬಾ ದೊಡ್ಡದಿದ್ದರೂ ಕಠಿಣತೆಯನ್ನು ಹೊಂದಿಲ್ಲ. ಹಾಗಾಗಿ ಈಗಾಗಲೇ 104 ಬಾರಿ ತಿದ್ದುಪಡಿಯಾಗಿದೆ. ಕರಡು ಸಮಿತಿಗೆ ಗಾಂಧೀಜಿ ರವರು ಕಾನೂನು, ರಾಜನೀತಿ ಹಾಗೂ ಅಥ-ರ್ಶಾಸ್ತ್ರ ವಿಷಯಗಳಲ್ಲಿ ಪಿಎಚ್‌ಡಿ ಪದವಿ ಪಡೆದಿದ್ದ ಶೈಕ್ಷಣಿಕ ದಿಗ್ಗಜ ಅಂಬೇಡ್ಕರ್ ರವರ ಹೆಸರನ್ನು ಕರಡು ಸಮಿತಿ ಅಧ್ಯಕ್ಷರನ್ನಾಗಿ ನೇಮಿಸಲು ಸೂಚಿಸಿದ್ದರಿಂದಲೇ ಇಂಥ ಅಧ್ಬುತವಾದ ಸಂವಿಧಾನ ರಚನೆಯಾಗಲು ಸಾಧ್ಯವಾಯಿತು ಎಂದು ಹೇಳಿದರು.

ಅತಿಥಿಯಾಗಿ ಆಗಮಿಸಿದ್ದ ಸಂತ ಕನಕದಾಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಬಿ.ಎಸ್. ಮೇಟಿ ಮಾತನಾಡಿ ನಮ್ಮ ದೇಶದ ಸಂವಿಧಾನವು ದೇಶದ ಎಲ್ಲ ಜಾತಿ, ಧರ್ಮಗಳ ಜನರನ್ನು ಒಂದುಗೂಡಿಸುವ ಶಾಂತಿಯ ತೋಟವೆಂದು ಬಣ್ಣಿಸಿದರು.

ಕಾರ್ಯಕ್ರಮಕ್ಕೂ ಮೊದಲು ಸಂವಿಧಾನ ಪೀಠಿ-ಕೆಯನ್ನು ಬೋಧಿಸಲಾಯಿತು. ಪಟ್ಟಣದ ಸರ್ಕಾರಿ ಪದವಿ ಕಾಲೇಜಿನ ಪ್ರಾಧ್ಯಾಪಕಿ ರಾಜೇಶ್ವರಿ ಪಾತ್ರೋಟ, ಪ್ರಾಂಶುಪಾಲೆ ಆರ್.ಬಿ.ರೂಡಗಿ ಸೇ-ರಿದಂತೆ ಸಿಬ್ಬಂದಿವರ್ಗ, ವಿದ್ಯಾರ್ಥಿ, ವಿದ್ಯಾರ್ಥಿಯರು ಪಾಲ್ಗೊಂಡಿದ್ದರು.

ವಿದ್ಯಾರ್ಥಿಗಳಾದ ಅದಿತಿ ಪವಾರ ಮತ್ತು ಸಂಗಮ್ಮ ಮನಗೂಳಿ ಕಾರ್ಯಕ್ರಮ ನಿರ್ವಹಿಸಿದರು.

# ಸೃಜನಾತ್ಮಕತೆ ಹೋರಹಾಕುವುದೇ ಸಹಪಠ್ಯ ಚಟುವಟಿಕೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಸೃಜನಾತ್ಮಕತೆ ಹೋರಹಾಕುವುದೇ ಸಹಪಠ್ಯ ಚಟುವಟಿಕೆ ಎಂದು ವಿಜಯಪುರ ಗ್ರಾಮೀಣವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಮೋದಿನಿ ಬಲೋಲಮಟ್ಟಿ ಹೇಳಿದರು.

ತಾಲ್ಲೂಕಿನ ಐನಾಪೂರ ಎಲ್.ಟಿ. ಪ್ರೌಢ ಶಾಲೆಯಲ್ಲಿ ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಗ್ರಾಮೀಣವಲಯ ಹಾಗೂ ಬಾಲಾಜಿ ಬಂಜಾರಾ ವಿಧ್ಯಾವರ್ಧಕ ಸಂಘದ ಸಹಯೋಗದಲ್ಲಿ ಸೊಮವಾರ ನಡೆದ 2023-24 ನೇ ಸಾಲಿನ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರ ಸಹಪಠ್ಯ ಚಟುವಟಿಕಾ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಪ್ರಾಥ-ಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅರ್ಜುನ ಲಮಾಣಿ ಮಾತನಾಡಿ ಶಿಕ್ಷಕರು ಕೇವಲ ಬೋಧನೆಗೆ ಮಾತ್ರ ಸೀಮಿತವಾಗದೆ ಸಂಸ್ಕೃತಿ-ಕ ಹಾಗೂ ಸಹಪಠ್ಯ ಚಟುವಟಿ-ಕೆಗಳಲ್ಲೂ ಸಹ ಭಾಗಿಯಾಗಬೇಕು ಆಗ ಮಾತ್ರ ಬೋಧನೆಯಲ್ಲಿ ಹೊಸ ಆವಿಷ್ಕಾರಗಳನ್ನು ಅಳವಡಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಶಿಕ್ಷಣ ಸಂಯೋಜಕರು ಪ್ರಭು ಬಿರಾದಾರ ಮಾತನಾಡಿ ಪ್ರತಿ ವರ್ಷವೂ ಕೂಡ ಸಹಪಠ್ಯ ಚಟುವಟಿಕೆಗಳನ್ನು ವ್ಯವಸ್ಥಿತವಾಗಿ ನಮ್ಮ ತಾಲ್ಲೂಕಿನಲ್ಲಿ ನಿರ್ವಹಣೆ ಮಾಡುತ್ತಾ ಬಹುಮಾನ ಪಡೆಯುವ ಶಿಕ್ಷಕರಿಗೆ ಪ್ರಥಮ, ದ್ವಿತೀಯ ಹಾಗುಯ ತೃತೀಯ ಸ್ಥಾನದ ಪ್ರಶಸ್ತಿ ಪತ್ರಗಳನ್ನು ನೀಡಿ ಗೌರವಿಸಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಎಚ್.ಎಂ. ಚೌಹಾನ, ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಎ. ಬಿ. ದಡಕೆ, ಬಿ. ಎಸ್. ಮಠ, ಸಂದೀಪ್ ದೇಶಪಾಂಡೆ, ಹನುಮಂತ್ ಕುಡಚಿ, ಬಿ.ಎ. ರೆಬಿನಾಳ, ಜಿಓಸಿಸಿ ಬ್ಯಾಂಕಿನ ನಿರ್ದೇಶಕ, ಸಿ.ಟಿ. ಜತ್ತಿ, ನೀಲಾ ಇಂಗಳೆ, ನಿಜು ಮೇಲಿನಕೇರಿ, ಉದಯಕುಮಾರ ಕೋಟ್ಯಾಳ, ಮಲ್ಲಿಕಾರ್ಜುನ್ ಟಕ್ಕಳಕಿ, ರವೀಂದ್ರ ಉಗಾರ, ಚೆನ್ನಯ್ಯ ಮಠಪತಿ, ಸಾಬು ಗಗನಮಾಲಿ, ಎಚ್.ಎಸ್. ಇಂಡಿ, ವಾಸಿಂ ಚಟ್ಟರಕಿ, ಸಂಜು ಚವಾನ, ವಿಶ್ವನಾಥ ಮೇತ್ರಿ, ಶಂಕರ್ ತಳವಾರ, ಜಿ.ಟಿ. ಕಾಗವಾಡ, ರವಿ ಪವಾರ್, ಸುಭಾಷ ರಾಥೋಡ ಇದ್ದರು.

ನಿರೂಪಣೆಯನ್ನ ಆರ್. ಕೆ. ಕುಲಕರ್ಣಿ, ಸ್ವಾಗತವನ್ನು ಶರಣು ರೂಗಿ, ವಂದನಾರ್ಪಣೆಯನ್ನು ರವೀಂದ್ರ ಚಿಕ್ಕಮಠ ನೆರವೇರಿಸಿದರು.

# ನಗುವಿನಿಂದ ಆಯುಷ್ಯ ಹೆಚ್ಚುತ್ತದೆ :ಪ್ರಾಣೇಶ

**ಉದಯರಶ್ಮಿ ನ್ಯೂಸ್**



ಇಂಡಿ: ಹಾಸ್ಯವು ಬುದ್ಧಿವಾದದ ಮೂಲತತ್ವವಾಗಿದೆ. ಸಾಂಕ್ರಾಮಿಕ ಪರಹಿತಚಿಂತನೆಯ ನಗುವು ಆತ್ಮವಾಗಿದೆ. ನಗುವಿನಿಂದ ಆಯುಷ್ಯ ಹೆಚ್ಚಾಗುತ್ತದೆ ಎಂದು ಗಂಗಾವತಿ ಪ್ರಾಣೇಶ ಹೇಳಿದರು.

ಇಂಡಿ ತಾಲೂಕಿನ ತಡವಲಗಾ ಗ್ರಾಮದ ಜೋಡಗುಡಿಯ ಶ್ರೀ ಮರುಳಸಿದ್ದೇಶ್ವರ ನೂತನ ದೇವಾಲಯದ ಲೋಕಾರ್ಪಣೆ ನಿಮಿತ್ತವಾಗಿ ನಡೆದ ಖ್ಯಾತ ಹಾಸ್ಯಗಾರ ಶ್ರೀ ಗಂಗಾವತಿ ಪ್ರಾಣೇಶ, ಬಸವರಾಜ ಮಾಮನಿ,ನರಸಿಂಹ ಜೋಶಿ ತಂಡದಿಂದ ನಡೆದ ನಗೆ ಸಂಭ್ರಮ ಹಾಗೂ ಪ್ರಶಸ್ತಿ ವಿತರಣೆ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ನರಸಿಂಹ ಜೋಶಿ ಮಾತನಾಡಿ, ಹಾಸ್ಯವು ಹೃದಯಗಳನ್ನು ಅವರ ಬೆತ್ತಲೆ ವಾಸ್ತವಿಕತೆಯಲ್ಲಿ ಸೆರೆಹಿಡಿಯುತ್ತದೆ. ಅದು ಮೀರಿದ ಅತಿವಾಸ್ತವಿಕತೆಯ ಕುರುಹುಗಳನ್ನು ಸಹ ನೀಡುತ್ತದೆ. ನಗುವಿಗೆ ವಯೋವೃದ್ಧಿಗೆ, ಮಿತಿಯಿಲ್ಲ. ಹಾಸ್ಯವು ರಂಗದ ಹಂತಗಳ ಜೀವವೈವಿಧ್ಯವನ್ನು ಸೆರೆಹಿಡಿಯುತ್ತದೆ ಎಂದರು.

ಬಿಜೆಪಿ ಮುಖಂಡರು ಹಾಗೂ ಸ್ವದೇಶಿ ಜಾಗರಣ ಮಂಚ ಸಂಚಾಲಕ ಶಂಕರಗೌಡ ಪಾಟೀಲ ( ಡೋಮನಾಳ) ಹಾಗೂ ಬಿಜೆಪಿ ಜಿಲ್ಲಾ ವೈದ್ಯಕೀಯ ಪ್ರಕೋಷ್ಠಿ ಸಂಚಾಲಕ ಬಾಬುರಾಜೇಂದ್ರ ನಾಯಕ ಅ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ತಡವಲಗಾ ಗ್ರಾಮದ ಶ್ರೀ ಅಭಿನವ ರಾಚೋಟೇಶ್ವರ ಶಿವಾಚಾರ್ಯರು ವಹಿಸಿದ್ದರು, ಸಾನಿಧ್ಯವನ್ನು ವಹಿಸಿದ್ದ ಕೊಟ್ನೂರು ಶ್ರೀ ಸಿದ್ದಲಿಂಗ ಶಿವಾಚಾರ್ಯರು, ರೋಡಗಿ ಶ್ರೀಗಳು, ಅಭಿನವ ಪುಂಡಲಿಂಗ ಮಾಹಾರಾಜರು , ಹಾಗೂ ಖ್ಯಾತ ಪುರಾಣಿಕರಾದ ಶಿವಾನಂದ ಶಾಸ್ತ್ರಿಗಳು ಉಪಸ್ಥಿತರಿದ್ದರು. ಜಿ.ಪಂ ಮಾಜಿ ಉಪಾಧ್ಯಕ್ಷ ಬಾಬು ಸಾವಕಾರ ಮೇತ್ರಿ, ಬಸವರಾಜ ಇಂಡಿ, ಚಂದ್ರಶೇಖರ ರೂಗಿ, ಮಳಸಿದ್ದಪ್ಪ ಬ್ಯಾಳಿ, ಕಾಂತು ಇಂಡಿ ,ಮಲ್ಲನಗೌಡ ಪಾಟೀಲ, ಗುರುನಾಥ ಬಗಲಿ, ಅಪ್ಪು ಕಲ್ಲೂರ, ಜಟ್ಟಪ್ಪ ಮರಡಿ,ಗುಂಡು ರೂಗಿ,ಮಲ್ಲಪ್ಪ ತಡಗಿ ಮತ್ತಿತರಿದ್ದರು.

# ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಗುರುಸ್ಪಂದನೆ :ಧರಿಕಾರ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ತಮಗೆ ಸಿಗಬೇಕಾದ ಸೌಲಭ್ಯಗಳನ್ನು ಪಡೆಯುವುದರ ಜೊತೆಗೆ ಮಕ್ಕಳಿಗೆ ನೀಡಬೇಕಾದ ಶಿಕ್ಷಣ, ಸೌಲಭ್ಯ, ಅವಕಾಶಗಳನ್ನು ಪ್ರಾಮಾಣಿಕವಾಗಿ ನೀಡಲು ಪ್ರತಿಯೊಬ್ಬ ಶಿಕ್ಷಕರು ಮುಂದಾಗಬೇಕು ಎಂದು ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಯು.ಬಿ.ಧರಿಕಾರ ಹೇಳಿದರು.

ಪಟ್ಟಣದ ಗಾಂಧಿ ರಸ್ತೆಯಲ್ಲಿರುವ ಸರ್ಕಾರಿ ಕನ್ನಡ ಗಂಡು ಮಕ್ಕಳ ಪ್ರೌಢ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಗುರುಸ್ಪಂದನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯಕ್ರಮವೇ ಗುರುಸ್ಪಂದನೆ ಕಾರ್ಯಕ್ರಮ. ಶಿಕ್ಷಕರು ತಮ್ಮ ಸೇವಾ ಅವಧಿಯ ಯಾವುದಾದರೂ ಮಾಹಿತಿ ತಮ್ಮ ಸೇವಾ ಪುಸ್ತಕದಲ್ಲಿ ಕಾರಣಾಂತರಗಳಿಂದ ಸೇರ್ಪಡೆ ಮಾಡದೇ ಬಿಟ್ಟು ಹೋದಲ್ಲಿ ಈ ಕಾರ್ಯಕ್ರಮದ ಮೂಲಕ ಸೇರ್ಪಡೆ ಮಾಡಿಕೊಳ್ಳಬಹುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಕರಾಪ್ರಾಶಾಶಿ ಸಂಘದ ಅಧ್ಯಕ್ಷ ಬಿ.ಎಚ್.ಮುದ್ನೂರ ಮಾತನಾಡಿ, ಕಳೆದ ಎರಡು ಮೂರು ವರ್ಷಗಳಿಂದ ಗುರುಸ್ಪಂದನ ಕಾರ್ಯಕ್ರಮ ಮಾಡಲು ಸಾಧ್ಯವಾಗಿರಲಿಲ್ಲ. ಈ ಬಾರಿ ಇಲಾಖೆಯ ಸಹಾಯ ಸಹಕಾರದಿಂದ ಈ ಕಾರ್ಯಕ್ರಮ ಯಶಸ್ವಿಯಾಗಿದ್ದು ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಘದ ವತಿಯಿಂದ ಅಭಿನಂದಿಸುವದಾಗಿ ತಿಳಿಸಿದರು.

ಮುಖ್ಯ ಅತಿಥಿಗಳಾಗಿದ್ದ ಸರ್ಕಾರಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯ ಎಂ.ಎಸ್. ಕವಡಿಮಟ್ಟಿ ಮಾತನಾಡಿ, ಈ ಶಾಲೆ ಪಟ್ಟಣದ ಹೃದಯ ಭಾಗದಲ್ಲಿರೂ ಸಹಿತ ಎಷ್ಟೋ ಜನಕ್ಕೆ ಗೊತ್ತಿಲ್ಲ. ನಮ್ಮ ಶಾಲೆಯಲ್ಲಿ ಗುರುಸ್ಪಂದನ ಕಾರ್ಯಕ್ರಮ ಮಾಡುವುದಾಗಿ ಆದೇಶ ಬಂದಾಗ ನಮ್ಮ ಶಾಲೆಯ ಪ್ರಚಾರವಾಗುತ್ತದೆ ಎಂದು ಸಂತೋಷವಾಗಿದೆ. ಇಂತಹ ಇನ್ನಷ್ಟು ಕಾರ್ಯಕ್ರಮಗಳನ್ನು ನಮ್ಮ ಶಾಲೆಯಲ್ಲಿ ಆಚರಿಸುವ ಮೂಲಕ ನಮ್ಮ ಶಾಲೆಯ ಮೆರುಗನ್ನು ಹೆಚ್ಚಿಸಬೇಕು ಎಂದರು.

ಈ ವೇಳೆ ರಾಜ್ಯಮಟ್ಟದ ಸಂಗಮಸಿರಿ ಪ್ರಶಸ್ತಿಗೆ ಭಾಜನರಾನ ಸಿದ್ದನಗೌಡ ಬಿಜ್ಜೂರ, ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಯು.ಬಿ.ಧರಿಕಾರ, ಕರಾಪ್ರಾಶಾಶಿ ಸಂಘದ ಅಧ್ಯಕ್ಷ ಬಿ.ಎಚ್.ಮುದ್ನೂರ, ಪ್ರೌಢ ಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಎಂ.ಎಸ್.ಕವಡಿಮಟ್ಟಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಎಸ್.ಡಿ.ಸಿ ಗಳಾದ ರಘುವೀರ ಹೂಲಗೇರಿ ಮತ್ತು ಸುರೇಶ ಮೋಟಗಿ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಪ್ರಸ್ತಾವಿಕವಾಗಿ ಕರಾಪ್ರಾಶಾಶಿ ಸಂಘದ ಕಾರ್ಯದರ್ಶಿ ಎನ್.ಎಸ್. ತುರಡಗಿ ಮಾತನಾಡಿದರು.


ಸಂಘದ ಉಪಾಧ್ಯಕ್ಷ ಎಸ್.ಬಿ.ಬಿರಾದಾರ, ಸಹ ಕಾರ್ಯದರ್ಶಿಗಳಾದ ಎಸ್. ಆರ್.ಪಾಟೀಲ ಮತ್ತು ಜೆ. ಎಂ.ಕುಂದರಗಿ, ಸಮಘಟನಾ ಕಾರ್ಯದರ್ಶಿ ಆಯ್.ಎ.ಹಿರೇಮಠ, ಕರಾಸೌ ಸಂಘದ ಕಾರ್ಯದರ್ಶಿ ಬಿ.ಎಸ್.ಹೊಳಿ, ಶಿಕ್ಷಣ ಸಂಯೋಜಕ ಎಸ್.ಎಸ್.ಹಿರೇಮಠ, ಸದಸ್ಯರಾದ ಟಿ.ಎನ್.ರೂಡಗಿ, ಎಸ್.ಟಿ.ಪಾಟೀಲ, ಎಸ್.ಎನ್.ಲಿಂಗದಳ್ಳಿ, ಎನ್.ಪಿ. ಎಸ್ ನೌಕರರ ಸಂಘದ ಅಧ್ಯಕ್ಷ ವಿ.ಎಂ.ಪಾಟೀಲ, ಪ್ರ.ಕಾರ್ಯದರ್ಶಿ ಎಸ್.ಬಿ.ಬೀರಗೊಂಡ ಸೇರಿದಂತೆ ಮತ್ತೀತರರು ಭಾಗಿಯಾಗಿದ್ದರು.

ಆರ್.ಬಿ.ಕೋನರೆಡ್ಡಿ, ಆಯ್.ಎ.ಹಿರೇಮಠ, ಎಸ್. ಆರ್.ಪಾಟೀಲ ಕಾರ್ಯಕ್ರಮ ನಿರ್ವಹಿಸಿದರು.

## ವಿಜಯಪುರ ಜ್ಞಾನಯೋಗಾಶ್ರಮದಲ್ಲಿ ಜ್ಞಾನಯೋಗಿ ಸಿದ್ಧೇಶ್ವರ ಶ್ರೀಗಳಿಗೆ "ಗುರುನಮನ"

# ಜ.1 ಮತ್ತು 2 ರಂದು "ಗುರುನಮನ" ಮಹೋತ್ಸವ

**ಉದಯರಶ್ಮಿ ನ್ಯೂಸ್**



ವಿಜಯಪುರ: ಶತಮಾನದ ಸಂತ, ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳು ಭೌತಿ-ಕ ದೇಹವನ್ನು ತ್ಯಜಿಸಿ ಬಯಲಲ್ಲಿ ಬಯಲಾಗಿ ಒಂದು ವರ್ಷವಾಗುವ ಹಿನ್ನೆಲೆಯಲ್ಲಿ ಮುಂಬರುವ ಜನೇವರಿ 1 ಮತ್ತು 2 ರಂದು ನಗರದ ಜ್ಞಾನಯೋಗಾಶ್ರಮದಲ್ಲಿ "ಗುರುನಮನ ಮಹೋತ್ಸವ" ವನ್ನು ಹಮ್ಮಿಕೊಳ್ಳಲಾಗಿದೆ.

ಜ್ಞಾನಯೋಗಾಶ್ರಮದ ಅಧ್ಯಕ್ಷರಾದ ಶ್ರೀ ಬಸವಲಿಂಗ ಮಹಾಸ್ವಾಮಿಗಳು ರವಿವಾರ ಜ್ಞಾನಯೋಗಾಶ್ರಮದಲ್ಲಿ ಕರೆದಿದ್ದ ಮಾಧ್ಯಮ ಪ್ರತಿನಿಧಿಗಳ ಸಭೆಯಲ್ಲಿ ಈ ಕುರಿತು ವಿವರಣೆ ನೀಡಿದರು.

ಹಲವು ದಶಕಗಳವರೆಗೆ ಆದ-ಧ್ಯಾತ್ಮಿಕ ಜ್ಞಾನದಾಸೋಹ ಮಾಡಿ ಎಲ್ಲ ಜನಾಂಗದ ಪ್ರೀತಿಯನ್ನು ಗಳಿಸಿದ ಪೂಜ್ಯ ಸಿದ್ಧೇಶ್ವರ ಶ್ರೀಗಳು 2023 ರ ಜನೇವರಿ 2 ರಂದು ದೇಹತ್ಯಾಗ ಮಾಡಿ ಬಯಲಲ್ಲಿ ಬಯಲಾದರು. ತನ್ನಿಮಿತ್ಯ ಆ ದಿನದಂದು ಪೂಜ್ಯರಿಗೆ ಭಕ್ತರೆಲ್ಲ ಸೇರಿ ಹೃದಯಾಂತರಾಳದ ನಮನಗಳನ್ನು ಅರ್ಪಿಸಲು ನಿರ್ಧ-ರಿಸಿದ್ದು, ಗುರುನಮನ ಮಹೋತ್ಸವದ ಅಂಗವಾಗಿ ಜ್ಞಾನದಾಸೋಹ ಸತ್ಸಂಗ ಕಾರ್ಯಕ್ರಮ, ವಿಶೇಷ ಗೋಷ್ಠಿಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಜ.1 ರಂದು ದೀಪೋತ್ಸವ ನಡೆಯುವುದು. ಅಂದು ಸಂಜೆ ಜ್ಞಾನಯೋಗಾಶ್ರಮದಲ್ಲಿ ಪ್ರತಿಯೊಬ್ಬರು ದೀಪಗಳನ್ನು ಬೆಳಗಿಸುವ ಮೂಲಕ ಜ್ಞಾನಯೋಗಿಗಳಿಗೆ ಗುರುನಮನ ಸಲ್ಲಿಸುವುದು. ಜ.2 ರಂದು ಬೆಳಿಗ್ಗೆ 8 ಗಂಟೆಗೆ ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳ ಗದ್ದುಗೆ ಪೂಜೆ ನಂತರ ಜ್ಞಾನಯೋಗಿ ಸಿದ್ಧೇಶ್ವರ ಮಹಾಸ್ವಾಮಿಗಳ ಭಾವಚಿತ್ರಕ್ಕೆ ಗೀತನಮನ ಜೊತೆಗೆ ಸಾಮೂಹಿಕವಾಗಿ ಪುಷ್ಪಗಳನ್ನು ಅರ್ಪಿಸುವ ಮೂಲಕ ಗುರುನಮನ ಸಲ್ಲಿಸುವ ವಿಶೇಷ ಕಾರ್ಯಕ್ರಮ ನಡೆಯುವುದು. ದಿನವಿಡೀ ನಡೆಯುವ ಈ ಕಾರ್ಯಕ್ರಮದಲ್ಲಿ ನಾಡಿನ ಅನೇಕ ಪೂಜ್ಯರು, ಗಣ್ಯಮಾನ್ಯರು ಸೇ-ರಿದಂತೆ ಲಕ್ಷಾಂತರ ಜನ ಭಕ್ತರು ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ಗುರುನಮನ ಮಹೋತ್ಸವದ ಪೂರ್ವಭಾವಿಯಾಗಿ ಬರುವ ಡಿಸೆಂಬರ 1 ರಿಂದ 15 ರ ವರೆಗೆ ನಗರದ ಎಲ್ಲ ಪ್ರಮುಖ ಬಡಾವಣೆಗಳಲ್ಲಿ ಜ್ಞಾನದಾಸೋಹ ಕಾರ್ಯಕ್ರಮ ನಡೆಯುವುದು. ಡಿ.23 ರಿಂದ 31 ರ ವರೆಗೆ ಜ್ಞಾನಯೋಗಾಶ್ರಮದಲ್ಲಿ ಪ್ರತಿದಿನ ಸಂಜೆ ಗೋಷ್ಠಿಗಳು ನಡೆಯುವವು. ಗ್ರಾಮೀಣ ಜನರ ಬದುಕು, ಯುವಕರು ಮತ್ತು ದೇಶಪ್ರೇಮ, ಮಹಿಳೆ ಮತ್ತು ಸಂಸ್ಕೃತಿ, ಶಿಕ್ಷಣ ಮತ್ತು ವಿಜ್ಞಾನ, ಜನಪದ ಕಲೆಗಳು, ಕ್ರೀಡೆ-ಯೋಗ-ಆರೋಗ್ಯ, ಜಾಗತಿಕ ಆಧ್ಯಾತ್ಮಿಕ ಚಿಂತನೆ, ಪರಿಸರ ಸಂರಕ್ಷಣೆ, ಸ್ವಚ್ಛತೆ- ಸಮಯಪಾಲನೆ- ವ್ಯಸನಮುಕ್ತಿ ಎಂಬ ವಿಷಯ ಕುರಿತು ಒಂಭತ್ತು ಗೋಷ್ಠಿಗಳು ನಡೆಯಲಿದ್ದು, ನಾಡಿನ ಹಲವಾರು ಪೂಜ್ಯರು, ವಿದ್ವಾಂಸರು, ಪಂಡಿತರು, ಗಣ್ಯವ್ಯಕ್ತಿಗಳು ಭಾಗವಹಿಸಿ ವಿಷಯ ಮಂಡಿಸಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಪೂಜ್ಯ ಸಿದ್ದೇಶ್ವರ ಶ್ರೀಗಳ ಪ್ರವಚನ ಆಧಾರಿತ ಕನ್ನಡ ಮತ್ತು ಹಿಂದಿ ಗ್ರಂಥಗಳ ಬಿಡುಗಡೆ, ಜ್ಞಾನಯೋಗಾಶ್ರಮದ ಗುರುದೇವ ಗ್ರಂಥಾಲಯ ನೂತನ ಕಟ್ಟಡದ ಉದ್ಘಾಟನೆ ಹಾಗೂ ಶ್ರೀಗಳ ವಿಶೇಷ ಭಾವಚಿತ್ರಗಳ (ಫೋಟೋ ಗ್ಯಾಲರಿ) ಪ್ರದರ್ಶನವೂ ನಡೆಯಲಿದೆ ಎಂದು ಅವರು ತಿಳಿಸಿದರು.

ಶತಮಾನದ ಸಂತ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳು ಬಾಲ್ಯದಿಂದಲೇ ಆಧ್ಯಾತ್ಮಿಕ ಸಾಧನೆಯಲ್ಲಿ ಆಸಕ್ತಿ ಹೊಂದಿದವರು. ತಮ್ಮ ಹದಿನಾಲ್ಕನೇ ವಯಸ್ಸಿನಲ್ಲಿ ಆಧ್ಯಾತ್ಮಿಕ ಸಾಧನೆಯ ಹಂಬಲದಿಂದ ವೇದಾಂತಕೇಸರಿ ಶ್ರೀ ಮಲ್ಲಿಕಾರ್ಜುನ ಶಿವಯೋಗಿಗಳ ಶಿಷ್ಯತ್ವ ಪಡೆದರು.ಗುರುಗಳ ಮಾರ್ಗದರ್ಶನದಲ್ಲಿ ಸಾಧನೆಗೈದು ಅವರು ಜ್ಞಾನಯೋಗಿಯಾಗಿ ಬೆಳೆದರು. ಜ್ಞಾನಸೌರಭ ಪಸರಿಸುವುದಕ್ಕಾಗಿಯೇ ಅವತರಿಸಿದ ಪೂಜ್ಯರು ನುಡಿದುದ್ದೆಲ್ಲಾ ಪ್ರವಚನಗಳಾದವು. ಬರೆದ ಬರಹವೆಲ್ಲಾ ಸಾಹಿತ್ಯವಾಯಿತು. ಅವರು ನಡೆದಾಡಿದ ನೆಲ ಪಾವನವಾಯಿತು. ಯಾವ ರೀತಿ ಜೇನುನೊಣ ಹೂವುಗಳ ಮಕರಂದವನ್ನು ಹೀರಿ ಸಿಹಿಜೇನು ಕೊಡುತ್ತದೋ ಅದೇ ರೀತಿ ಪೂಜ್ಯ ಸಿದ್ಧೇಶ್ವರ ಶ್ರೀಗಳು ಎಲ್ಲ ಧರ್ಮದ ಜ್ಞಾನವನ್ನು ಹೀರಿ ಸಮಾಜಕ್ಕೆ ಆದ-ಧ್ಯಾತ್ಮದ ಅಮೃತವನ್ನು ನೀಡಿದ ಶ್ರೇಷ್ಠ ಸಂತರು. ಅವರು ಈಗ ಬಯಲಲ್ಲಿ ಬಯಲಾಗಿದ್ದಾರೆ ಅಂಥ ಪೂಜ್ಯ-ರಿಗೆ ಗುರುನಮನ ಸಮರ್ಪಣೆ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.

ಡಾ.ಹರ್ಷಾನಂದ ಮಹಾಸ್ವಾಮಿಗಳು (ಹುಲ್ಯಾಳ) ಮಾತನಾಡಿ, ಜ.1 ಮತ್ತು 2 ರಂದು ಜ್ಞಾನಯೋಗಾಶ್ರಮದಲ್ಲಿ ಹಮ್ಮಿಕೊಂಡಿರುವುದು ಜ್ಞಾನಯೋಗಿ ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳಿಗೆ ಗುರುನಮನ ಸಮರ್ಪಣೆ ಮಾಡುವ ಕಾರ್ಯಕ್ರಮ. ಅದು ಪುಣ್ಯತಿಥಿ, ಪುಣ್ಯಸ್ಮರಣೆ ಕಾರ್ಯಕ್ರಮ ಅಲ್ಲ. ಜೀವನ್ಮುಕ್ತರಾದ ಮಹಾತ್ಮರಿಗೆ ಪುಣ್ಯತಿಥಿ ಮಾಡುವ ಅವಶ್ಯಕತೆ ಇರುವುದಿಲ್ಲ ಎಂದರು.



ಸಭೆಯಲ್ಲಿ ಡಾ. ಶ್ರದ್ಧಾನಂದ ಮಹಾಸ್ವಾಮಿಗಳು, ಅಂತಾರಾಷ್ಟ್ರೀಯ ಯೋಗಗುರು ಶ್ರೀ ಅಮೃತಾನಂದ ಮಹಾಸ್ವಾಮಿಗಳು, ಆಶ್ರಮದ ಕಾರ್ಯದರ್ಶಿ ಪ್ರೊ. ಹಳ್ಳದ, ಸಾಯಬಣ್ಣ ಬಾಲಗಾಂವಿ, ಸಂಗು ಸಜ್ಜನ ಉಪಸ್ಥಿತರಿದ್ದರು.